# ಅನಂತ ಜನಶಕ್ತಿ

ಸಂಪಾದಕ: ಎಸ್.ವೆಂಕಟೇಸುಲು
EDITOR : S VENKATESULU

ANANTHA JANA SAKTHI


ಕನ್ನಡ ದಿನಪತ್ರಿಕೆ
KANNADA DAILY

| ಸಂಪುಟ : 01 | ಸಂಚಿಕೆ : 24 | ರಿ.ನಂ : ಕೆಎನ್‌ಕೆಎಎನ್/26/ಎ5487 | ಬಳ್ಳಾರಿ | ಗುರುವಾರ | ದಿನಾಂಕ : 30-07-2026 | ಪುಟ : 04 | ಬೆಲೆ : 2-00 |
|---|---|---|---|---|---|---|---|
| VOLUME : 01 | ISSU : 24 | Reg No : KNKAN/26/A5487 | BELLARY | THURSDAY | DATE : 30-07-2026 | PAGES: 04 | PRICE: 2-00 |


## ಅಯೋಧ್ಯಾ ರಾಮ ಮಂದಿರ ಟ್ರಸ್ಟ್‌ಗೆ ಹೊಸ ಕಾರ್ಯದರ್ಶಿ ನೇಮಕ

ಅಯೋಧ್ಯೆ : ಅಯೋಧ್ಯೆಯ ಶ್ರೀ ರಾಮ ಮಂದಿರದಲ್ಲಿ ನಡೆದ ದೇಣಿಗೆ ಕಳ್ಳತನ ಪ್ರಕರಣ ಹಾಗೂ ಆಡಳಿತಾತ್ಮಕ ಬದಲಾವಣೆಗಳ ನಡುವೆಯೇ ಟ್ರಸ್ಟ್ ಮಹತ್ವದ ನಿರ್ಧಾರ ತಳೆದಿದೆ. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಆಯ್ಕೆ ಪ್ರಕ್ರಿಯೆ ನಡೆಯುತ್ತಿರುವ ಹಂತದಲ್ಲೇ, ಟ್ರಸ್ಟ್‌ನ ಮೊದಲ 'ಕಾರ್ಯದರ್ಶಿ' ಹುದ್ದೆಗೆ ಜಗದೀಶ್ ಅಫ್ಲೆ ಅವರನ್ನು ನೇಮಿಸಲಾಗಿದೆ. ಸೆಪ್ಟೆಂಬರ್ 2 ರಂದು ನಡೆಯಲಿರುವ ಟ್ರಸ್ಟ್‌ನ ಕಾರ್ಯಕಾರಿ ಸಮಿತಿ ಸಭೆಯಲ್ಲಿ ಇವರ ನೇಮಕಾತಿಗೆ ಅಧಿಕೃತ ಮುದ್ರೆ ಬೀಳಲಿದ್ದು, ಪ್ರಸ್ತುತ ಎಸ್‌ಬಿಐ ಬ್ಯಾಂಕ್ ಖಾತೆಗಳ ನಿರ್ವಹಣೆಗಾಗಿ ಅಫ್ಲೆ ಅವರನ್ನು ಅಧಿಕೃತ ಸಹಿದಾರರನ್ನಾಗಿ ನೇಮಿಸಲಾಗಿದೆ.
ಯಾರೀ ಜಗದೀಶ್ ಅಫ್ಲೆ? ಮಹಾರಾಷ್ಟ್ರದ ಪುಣೆ ಮೂಲದವರಾದ ಜಗದೀಶ್ ಅಫ್ಲೆ ಅವರು ಪ್ರತಿಷ್ಠಿತ ಐಐಟಿ ಬಾಂಬೆಯಿಂದ ಬಿ.ಟೆಕ್ ಹಾಗೂ ಎಲೆಕ್ಟ್ರಿಕಲ್ ಎಂಜಿನಿಯರಿಂಗ್‌ನಲ್ಲಿ ಎಂ.ಟೆಕ್ ಪದವಿ ಪಡೆದಿದ್ದಾರೆ. ಅಮೆರಿಕ ಹಾಗೂ ಹಲವು ಯುರೋಪಿಯನ್ ದೇಶಗಳ ಬಹುರಾಷ್ಟ್ರೀಯ ಕಂಪನಿಗಳಲ್ಲಿ ಉನ್ನತ ಹುದ್ದೆಗಳಲ್ಲಿ ಕೆಲಸ ಮಾಡಿದ ಅನುಭವ ಇವರಿಗಿದೆ.
ಬಾಲ್ಯದಿಂದಲೂ ರಾಷ್ಟ್ರೀಯ ಸ್ವಯಂಸೇವಕ ಸಂಘದ

2ನೇ ಪುಟಕ್ಕೆ..



## ವಂದೇ ಮಾತರಂಗೆ ಅವಮಾನ ಮಾಡುವುದು ಕ್ರಿಮಿನಲ್ ಅಪರಾಧ; ಮಸೂದೆ ಅಂಗೀಕಾರ



ನವದೆಹಲಿ : ರಾಷ್ಟ್ರೀಯ ಗೀತೆ–ಯಾದ 'ವಂದೇ ಮಾತರಂ'ಗೆ ಅವಮಾನ ಮಾಡುವುದನ್ನು ಕ್ರಿಮಿನಲ್ ಅಪರಾಧವೆಂದು ಪರಿಗಣಿಸುವ ಮಹತ್ವದ ವಿಧೇಯಕವನ್ನು ರಾಜ್ಯಸಭೆ ಇಂದು ಅಂಗೀಕರಿಸಿದೆ. ರಾಷ್ಟ್ರಗೀತೆಯಾದ ಜನಗಣಮನ ಗೀತೆಗೆ ನೀಡುವ ಗೌರವವನ್ನೇ ವಂದೇ ಮಾತರಂ ಗೀತೆಗೂ ನೀಡಬೇಕೆಂದು ಉಲ್ಲೇಖಿಸಲಾಗಿದೆ. 'ರಾಷ್ಟ್ರೀಯ ಗೌರವಕ್ಕೆ ಅಪಮಾನ ತಡೆ (ತಿದ್ದುಪಡಿ) ವಿಧೇಯಕ 2026'

2ನೇ ಪುಟಕ್ಕೆ..

**ಪ್ರಸ್ತಾವಿತ ಶಾಸನವು**
**ರಾಷ್ಟ್ರಧ್ವಜ, ಸಂವಿಧಾನ ಮತ್ತು ರಾಷ್ಟ್ರಗೀತೆ ಸೇರಿದಂತೆ ದೇಶದ ರಾಷ್ಟ್ರೀಯ ಸಂಕೇತಗಳಿಗೆ ಅಪಚಾರ ಅಥವಾ ಅವಮಾನ ಮಾಡುವುದನ್ನು ಕ್ರಿಮಿನಲ್ ಅಪರಾಧವನ್ನಾಗಿ ಮಾಡಲು ಹೊರಟಿದ್ದು, 3 ವರ್ಷಗಳವರೆಗೆ ಜೈಲು ಶಿಕ್ಷೆ ವಿಧಿಸುವ ನಿಬಂಧನೆಯನ್ನು ಹೊಂದಿದೆ. 'ಜನ ಗಣ ಮನ'ಗೆ ಇರುವಂತಹುದೇ ಶಾಸನಬದ್ಧ ರಕ್ಷಣೆಯನ್ನು 'ವಂದೇ ಮಾತರಂ'ಗೂ ನೀಡಲು ಉದ್ದೇಶಿಸಿದೆ. ವಂದೇ ಮಾತರಂ ರಚನೆಯಾಗಿ 150 ವರ್ಷಗಳು ಪೂರೈಸುತ್ತಿರುವುದರ ನಡುವೆಯೇ ಸರ್ಕಾರ ಈ ಮಹತ್ವದ ಹೆಜ್ಜೆಯನ್ನು ಇಟ್ಟಿದೆ.**

## ಕಲ್ಲಿದ್ದಲು ಹಗರಣ; ಮನಮೋಹನ್ ಸಿಂಗ್‌ಗೆ ಸುಪ್ರೀಂ ಕ್ಲೀನ್ ಚಿಟ್



ನವದೆಹಲಿ: ಕಲ್ಲಿದ್ದಲು ನಿಕ್ಷೇಪ ಹಂಚಿಕೆ ಕೇಸ್ ನಲ್ಲಿ ಮಾಜಿ ಪ್ರಧಾನಿ ಮನಮೋಹನ್ ಸಿಂಗ್ ಅವರನ್ನು ಸುಪ್ರೀಂ ಕೋರ್ಟ್ ಔಪಚಾರಿಕವಾಗಿ ಖುಲಾಸೆಗೊಳಿಸಿದೆ. ಸಿಬಿಐನ ಮುಕ್ತಾಯ ವರದಿಯನ್ನು ಕೋರ್ಟ್ ಅಂಗೀಕರಿಸಿದೆ ಮತ್ತು ಅವರ ವಿರುದ್ಧದ ಹಿಂದಿನ ಸಮನ್ಸ್ ಆದೇಶವನ್ನು ರದ್ದುಗೊಳಿಸಿದೆ.

ಡಿಸೆಂಬರ್ 27, 2024 ರಂದು ನಿಧನರಾದ ಸಿಂಗ್, ಈಗ ಹೈ ಪ್ರೊಫೈಲ್ ಕ್ರಿಮಿನಲ್ ಪ್ರಕರಣದಲ್ಲಿ ಔಪಚಾರಿಕವಾಗಿ ಖುಲಾಸೆಗೊಂಡಿದ್ದಾರೆ.
"ಮೇಲ್ಮನವಿ ಸಲ್ಲಿಸಿದವರ ದುರದೃಷ್ಟಕರ ನಿಧನದಿಂದಾಗಿ, ಈ ಮೇಲ್ಮನವಿಯನ್ನು ನಿಷ್ಪ್ರಯೋಜಕವೆಂದು ವಿಲೇವಾರಿ ಮಾಡಬಹುದು. ಆದರೆ ವಿಶೇಷ ನ್ಯಾಯಾಧೀಶರು ಮೇಲ್ಮನವಿ ಸಲ್ಲಿಸಿದ ಪ್ರಕರಣವನ್ನು ಗಮನದಲ್ಲಿಟ್ಟುಕೊಂಡು ಸಮನ್ಸ್ ಜಾರಿ ಮಾಡಿರುವ ಅಂಶವನ್ನು ಪರಿಗಣಿಸುವ ದೃಷ್ಟಿಯಿಂದ, ಸಿಬಿಐ ಸಲ್ಲಿಸಿದ ಎರಡೂ ಮುಕ್ತಾಯ ವರದಿಗಳನ್ನು ನಾವು ಪರಿಶೀಲಿಸಿದ್ದೇವೆ.
"ತನಿಖಾ ಸಂಸ್ಥೆಯ ವರದಿಗಳನ್ನು ಸ್ವೀಕರಿಸುವ ಕುರಿತು ಈ ನ್ಯಾಯಾಲಯವು ಸ್ಥಿರವಾಗಿ ನಿಗದಿಪಡಿಸಿದ ಸಂಬಂಧಿತ ನಿಯತಾಂಕಗಳನ್ನು ಪರಿಗಣಿಸಿ, ಸಿಬಿಐನ ಮುಕ್ತಾಯ ವರದಿಗಳನ್ನು ತಿರಸ್ಕರಿಸಲು ನ್ಯಾಯಾಧೀಶರಿಗೆ ಯಾವುದೇ ಕಾರಣವಿಲ್ಲ ಎಂದು ಗಮನಿಸಿದ್ದೇವೆ. ನಾವು

2ನೇ ಪುಟಕ್ಕೆ..

**ಖುಲಾಸೆಗೆ ಕಾರಣ**
**ಮುಖ್ಯ ನ್ಯಾಯಮೂರ್ತಿ ಸೂರ್ಯ ಕಾಂತ್ ಮತ್ತು ನ್ಯಾಯಮೂರ್ತಿಗಳಾದ ಜೋಯ್ಮಲ್ಯ ಬಾಗ್ಚಿ ಮತ್ತು ವಿ ಮೋಹನ ಅವರನ್ನೊಳಗೊಂಡ ಪೀಠ ಮಾಜಿ ಪ್ರಧಾನಿ ಮತ್ತು ಇತರರಿಗೆ ಕ್ಲೀನ್ ಚಿಟ್ ನೀಡುವ ಸಿಬಿಐನ ಮುಕ್ತಾಯ ವರದಿಯನ್ನು ಅಂಗೀಕರಿಸಿತು. ವಿಚಾರಣಾ ನ್ಯಾಯಾಲಯದ ನ್ಯಾಯಾಧೀಶರು ಸಿಬಿಐನ ಮುಕ್ತಾಯ ವರದಿಗಳನ್ನು ತಿರಸ್ಕರಿಸಲು ಯಾವುದೇ ಕಾರಣವಿಲ್ಲ ಎಂದು ಸುಪ್ರೀಂ ಕೋರ್ಟ್ ಹೇಳಿದೆ.**

## ರಾಜ್ಯ ವಿಧಾನಮಂಡಲದ ಮುಂಗಾರು ಅಧಿವೇಶನ ಆಗಸ್ಟ್ 13 ರಿಂದ ಆರಂಭ



ಬೆಂಗಳೂರು: ರಾಜ್ಯ ವಿಧಾನಮಂಡಲದ ಮುಂಗಾರು ಅಧಿವೇಶನ ಆಗಸ್ಟ್ 13 ರಿಂದ ಆರಂಭವಾಗಲಿದ್ದು, ಈ ಸಂಬಂಧ ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಇಲಾಖೆ ಮಂಗಳವಾರ ಅಧಿಕೃತ ಅಧಿಸೂಚನೆ ಹೊರಡಿಸಿದೆ. ಬೆಂಗಳೂರಿನ ವಿಧಾನಸೌಧದಲ್ಲಿ ವಿಧಾನಮಂಡಲದ ಉಭಯ ಸದನಗಳ ಮುಂಗಾರು ಅಧಿವೇಶನ ಆಗಸ್ಟ್ 13 ರಂದು ಬೆಳಗ್ಗೆ 11 ಗಂಟೆಗೆ ಆರಂಭವಾಗಲಿದ್ದು, ಆಗಸ್ಟ್ 27 ರವರೆಗೆ ಅಧಿವೇಶನ ನಡೆಯಲಿದೆ. ಮುಂಗಾರು ಅಧಿವೇಶನಕ್ಕೂ ಮುನ್ನ ಸಚಿವ ಸಂಪುಟ ವಿಸ್ತರಣೆಯಾಗಿ ಈ ಬಾರಿ ಹೊಸ ಸಚಿವರು ಆಗಮನವಾಗಲಿದೆ. ಸಂಪುಟದಲ್ಲಿ ಶೇಕಡಾ 75 ರಷ್ಟು ಮಂದಿ ಹೊಸಬರು, ಶೇಕಡಾ 25 ರಷ್ಟು ಹಳಬರು ಇರಲಿದ್ದಾರೆ ಎನ್ನಲಾಗಿದೆ.

## ಪ್ರಶ್ನೆಪತ್ರಿಕೆ ಸೋರಿಕೆ ಜಾಲ ನಿರ್ಮೂಲನೆಯೇ ತಿದ್ದುಪಡಿ ಮಸೂದೆಯ ಗುರಿ; ಕೇಂದ್ರ ಶಿಕ್ಷಣ ಸಚಿವ ಪ್ರಲ್ಹಾದ್ ಜೋಶಿ




ನವದೆಹಲಿ : ಲೋಕಸಭೆ ಅಧಿವೇಶನದಲ್ಲಿ ಇಂದು ಅಂಗೀಕರಿಸಿರುವ ಸಾರ್ವಜನಿಕ ಪರೀಕ್ಷೆ ಅಕ್ರಮ ತಡೆ ತಿದ್ದುಪಡಿ ಮಸೂದೆಯು ಪ್ರಶ್ನೆಪತ್ರಿಕೆ ಸೋರಿಕೆ ಜಾಲವನ್ನು ಸಂಪೂರ್ಣ ನಿರ್ಮೂಲನಗೊಳಿಸಲಿದೆ ಎಂದು ಕೇಂದ್ರದ ನೂತನ ಶಿಕ್ಷಣ ಸಚಿವ ಪ್ರಲ್ಹಾದ್ ಜೋಶಿ ವಿಶ್ವಾಸ ವ್ಯಕ್ತಪಡಿಸಿದ್ದಾರೆ.
ಲೋಕಸಭೆಯಲ್ಲಿ ಇಂದು ಮಂಡಿಸಿರುವ ಸಾರ್ವಜನಿಕ ಪರೀಕ್ಷೆಗಳ (ಅಕ್ರಮ ತಡೆ) ತಿದ್ದುಪಡಿ ವಿಧೇಯಕ, 2026 ಅನ್ನು ಸಂಸತ್ ಅಂಗೀಕರಿಸಿದ್ದು, ಪರೀಕ್ಷಾ ಅಕ್ರಮಗಳನ್ನು ತಡೆಯುವಲ್ಲಿ ಕಠಿಣ ಕಾನೂನು ಚೌಕಟ್ಟನ್ನು ತಂದಿದೆ ಎಂದು ಸಚಿವ ಪ್ರಲ್ಹಾದ್ ಜೋಶಿ ಪ್ರತಿಕ್ರಿಯಿಸಿದ್ದಾರೆ. ಪ್ರಶ್ನೆ ಪತ್ರಿಕೆ ಸೋರಿಕೆ, ಪರೀಕ್ಷಾ ಅಕ್ರಮಗಳಲ್ಲಿ ತೊಡಗುವವರಿಗೆ ಕಠಿಣ ಶಿಕ್ಷೆ ವಿಧಿಸುವ ನಿಟ್ಟಿನಲ್ಲಿ ಪ್ರಧಾನಿ ನರೇಂದ್ರ ಮೋದಿ ಕೈಗೊಂಡಿರುವ ತ್ವರಿತ ನ್ಯಾಯಾಲಯಗಳ ಸ್ಥಾಪನೆ ಶಿಕ್ಷಣ ವ್ಯವಸ್ಥೆಯನ್ನು ಮತ್ತಷ್ಟು ಬಲಪಡಿಸುತ್ತದೆ ಎಂದಿದ್ದಾರೆ.

**ಪರೀಕ್ಷಾ ಅಕ್ರಮದ ವಿರುದ್ಧ ಕಠಿಣ ಕ್ರಮ:**
ಪರೀಕ್ಷಾ ಅಕ್ರಮಗಳಲ್ಲಿ ತೊಡಗಿರುವವರ ವಿರುದ್ಧ ಕಠಿಣ ಕ್ರಮ ಕೈಗೊಳ್ಳುವಂತಹ ಮಹತ್ವದ ನಿಯಮಗಳನ್ನು ಒಳಗೊಂಡಿರುವ ಈ ಮಸೂದೆ ಪ್ರಶ್ನೆಪತ್ರಿಕೆ ಸೋರಿಕೆ ಜಾಲವನ್ನು ಸಂಪೂರ್ಣ

2ನೇ ಪುಟಕ್ಕೆ..

## ಧಾರ್ಮಿಕ ದತ್ತಿ ಇಲಾಖೆ ದೇವಾಲಯಗಳಲ್ಲಿ ಹುಂಡಿ ಎಣಿಕೆ ಕಡ್ಡಾಯ




ವಿಜಯನಗರ : ಜಿಲ್ಲೆಯ ಧಾರ್ಮಿಕ ದತ್ತಿ ಇಲಾಖೆಯ ವ್ಯಾಪ್ತಿಗೆ ಒಳಪಡುವ 'ಎ' ಮತ್ತು 'ಬಿ' ದರ್ಜೆಯ ಹಾಗೂ ಪ್ರಮುಖ ದೇವಾಲಯಗಳ ಆಡಳಿತ, ಹುಂಡಿ ಎಣಿಕೆ ಕಾರ್ಯವಿಧಾನ, ಆಸ್ತಿ ರಕ್ಷಣೆ ಹಾಗೂ ಭಕ್ತಾದಿಗಳ ಸೌಲಭ್ಯಗಳಲ್ಲಿ ಪಾರದರ್ಶಕತೆ ಕಾಪಾಡಲು ಹುಂಡಿ ಎಣಿಕೆಗೆ ಫೇಸ್ ರೆಕಗ್ನೈಜೇಷನ್, ಸಿಸಿಟಿವಿ, ಡಿಜಿಟಲ್ ಪಾವತಿ ವ್ಯವಸ್ಥೆ ಅಳವಡಿಸಬೇಕು ಎಂದು ಜಿಲ್ಲಾಧಿಕಾರಿ ಕವಿತಾ ಎಸ್ ಮನ್ನಿಕೇರಿ ತಿಳಿಸಿದರು.
ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಧಾರ್ಮಿಕ ದತ್ತಿ ಇಲಾಖೆ ವತಿಯಿಂದ ಬುಧವಾರ ಆಯೋಜಿಸಲಾಗಿದ್ದ ವಿವಿಧ ಕಾಮಗಾರಿ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.
ಹುಂಡಿ ಎಣಿಕೆ ಕಾರ್ಯ–ಕ್ಕೆ ನಿಯೋಜನೆಗೊಳ್ಳುವ ಕಂದಾಯ, ಪೊಲೀಸ್ ಹಾಗೂ ದೇವಾಲಯದ ಅಧಿಕಾರಿ, ಸಿಬ್ಬಂದಿಗಳು ಕಡ್ಡಾಯವಾಗಿ ಫೇಸ್ ರೆಕಗ್ನಿಷನ್ ಯಂತ್ರದ ಮೂಲಕವೇ ಹಾಜರಾತಿ ನಮೂದಿಸಬೇಕು. ಈ ಯಂತ್ರವನ್ನು ದೇವಾಲಯದ ನಿಧಿಯಿಂದಲೇ ಖರೀದಿಸಲು ಸೂಚಿಸಿದರು. ಎಣಿಕೆ ಕೊಠಡಿಗೆ ಪ್ರವೇಶಿಸುವ ಪ್ರತಿಯೊಬ್ಬ ಸಿಬ್ಬಂದಿ ತಮ್ಮ ಬಳಿ ಇರುವ ನಗದು ವಿವರವನ್ನು ಪ್ರವೇಶ ವಹಿಯಲ್ಲಿ ಕಡ್ಡಾಯವಾಗಿ ನಮೂದಿಸಬೇಕು ಎಂದು ಕಟ್ಟುನಿಟ್ಟಿನ ನಿರ್ದೇಶನ ನೀಡಿದರು.
ಜಿಲ್ಲೆಯ ಎ, ಬಿ ಹಾಗೂ ಅಗತ್ಯವಿರುವ 'ಸಿ' ದರ್ಜೆಯ ದೇವಾಲಯಗಳಲ್ಲಿ ಪ್ರತಿ ತಿಂಗಳಿಗೊಮ್ಮೆ ತಪ್ಪದೇ ಹುಂಡಿ ಎಣಿಕೆ ನಡೆಸಬೇಕು. ಈ ಎಣಿಕೆ ಪ್ರಕ್ರಿಯೆಯು ಸಹಾಯಕ ಆಯುಕ್ತರು, ಕಂದಾಯ ಇಲಾಖೆ, ಪೊಲೀಸ್, ತಹಶೀಲ್ದಾರ್, ಪಂಚಾಯತ್, ಬ್ಯಾಂಕ್ ಸಿಬ್ಬಂದಿ ಹಾಗೂ ಗೃಹ ರಕ್ಷಕ ದಳದ ಸಿಬ್ಬಂದಿಗಳ ಜಂಟಿ ಉಸ್ತುವಾರಿಯಲ್ಲಿ ನಡೆಯಬೇಕು. ಎಣಿಕೆ ಕಾರ್ಯಕ್ಕೆ ಯಾವುದೇ ಕಾರಣಕ್ಕೂ ಖಾಸಗಿ ವ್ಯಕ್ತಿಗಳ ನಿಯೋಜಿಸುವಂತಿಲ್ಲ. ಎಣಿಕೆ ಕಾರ್ಯದ ಸಂಪೂರ್ಣ ಪ್ರಕ್ರಿಯೆಯನ್ನು ಕಡ್ಡಾಯವಾಗಿ ವೀಡಿಯೋ ಚಿತ್ರೀಕರಣ

2ನೇ ಪುಟಕ್ಕೆ..

## ಸಚಿವ ಸಂಪುಟ ವಿಳಂಬಕ್ಕೆ ಸಿಎಂ ವಿರುದ್ಧ ಯತ್ನಾಳ ತೀವ್ರ ವಾಗ್ದಾಳಿ

### 'ಎಲ್ಲ ಖಾತೆಗಳನ್ನು ತಮ್ಮ ಬಳಿಯೇ ಇಟ್ಟುಕೊಳ್ಳಲು ಸಂಪುಟ ವಿಸ್ತರಣೆ ಮುಂದೂಡುತ್ತಿದ್ದಾರೆ; ಬರದ ನಡುವೆಯೂ 'ಕೃಷಿ ಸಚಿವರಿಲ್ಲ'

ವಿಜಯಪುರ : ರಾಜ್ಯ ಸಚಿವ ಸಂಪುಟ ವಿಸ್ತರಣೆಯಲ್ಲಿ ಆಗುತ್ತಿರುವ ವಿಳಂಬದ ವಿರುದ್ಧ ವಿಜಯಪುರ ನಗರ ಶಾಸಕ ಬಸನಗೌಡ ಪಾಟೀಲ ಯತ್ನಾಳ ತೀವ್ರ ವಾಗ್ದಾಳಿ ನಡೆಸಿದ್ದು, ಮುಖ್ಯಮಂತ್ರಿ ಡಿ.ಕೆ.




ಶಿವಕುಮಾರ್ ಉದ್ದೇಶಪೂರ್ವಕವಾಗಿಯೇ ಸಂಪುಟ ವಿಸ್ತರಣೆಯನ್ನು ಮುಂದೂಡುತ್ತಿದ್ದಾರೆ ಎಂದು ಆರೋಪಿಸಿದರು. ಕರ್ನಾಟಕ ರಾಜ್ಯ ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾಲಯದಲ್ಲಿ ಬುಧವಾರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, "ಸಚಿವ ಸಂಪುಟ ವಿಸ್ತರಣೆಯನ್ನು ವಿಳಂಬಗೊಳಿಸುತ್ತಾ ಹೋದರೆ ಹೆಚ್ಚಿನ ಇಲಾಖೆಗಳು ಮುಖ್ಯಮಂತ್ರಿಯವರ ಬಳಿಯೇ ಉಳಿಯುತ್ತವೆ. ಆಡಳಿತ ಮತ್ತು ಸಂಪನ್ಮೂಲಗಳ ಮೇಲಿನ ಸಂಪೂರ್ಣ ಹಿಡಿತ ಅವರ ಕೈಯಲ್ಲೇ ಇರುತ್ತದೆ. ಇದೇ ಉದ್ದೇಶದಿಂದ ಸಂಪುಟ ವಿಸ್ತರಣೆಯನ್ನು ಮುಂದೂಡಲಾಗುತ್ತಿದೆ," ಎಂದು ಕಿಡಿಕಾರಿದರು. ಸಂಪುಟ ವಿಸ್ತರಣೆಗೆ ರಾಹುಲ್ ಗಾಂಧಿ, ಪ್ರಿಯಾಂಕಾ ಗಾಂಧಿ ಅವರ ಬ್ಯುಸಿ ವೇಳಾಪಟ್ಟಿ ಹಾಗೂ ಸೋನಿಯಾ ಗಾಂಧಿಯವರ ಆರೋಗ್ಯದಂತಹ ಕಾರಣಗಳನ್ನು ಮುಂದಿಡಲಾಗುತ್ತಿದೆ

2ನೇ ಪುಟಕ್ಕೆ..

**'ಬರದ ನಡುವೆ ಕೃಷಿ ಸಚಿವರೇ ಇಲ್ಲ'**
**ರಾಜ್ಯದಲ್ಲಿ ಬರ ಪರಿಸ್ಥಿತಿ ಗಂಭೀರವಾಗುತ್ತಿದ್ದರೂ ಕೃಷಿ ಸಚಿವರೇ ಇಲ್ಲದಿರುವುದು ಸರ್ಕಾರದ ವೈಫಲ್ಯಕ್ಕೆ ಸಾಕ್ಷಿ ಎಂದು ಯತ್ನಾಳ ಹೇಳಿದರು. "ಮುಖ್ಯಮಂತ್ರಿ ಹೊಲಕ್ಕೆ ಹೋಗಿ ಫೋಟೋ ತೆಗೆಸಿಕೊಂಡರೆ ರೈತರ ಸಮಸ್ಯೆಗಳು ಬಗೆಹರಿಯುವುದಿಲ್ಲ. ಕೇಂದ್ರದ ಅಧ್ಯಯನ ತಂಡ ರಾಜ್ಯಕ್ಕೆ ಬರಬೇಕು. ಸಂಬಂಧಪಟ್ಟ ಇಲಾಖೆಗಳ ಸಚಿವರು ಹಾಗೂ ಅಧಿಕಾರಿಗಳು ಸ್ಥಳಕ್ಕೆ ಭೇಟಿ ನೀಡಿ ಬರದ ನೈಜ ಪರಿಸ್ಥಿತಿಯನ್ನು ಪರಿಶೀಲಿಸಿ ಪರಿಹಾರ ಕ್ರಮ ಕೈಗೊಳ್ಳಬೇಕು," ಎಂದು ಒತ್ತಾಯಿಸಿದರು.**

**'ಒಂದೇ ವ್ಯಕ್ತಿಯ ಕೈಯಲ್ಲಿ ಕೇಂದ್ರೀಕರಣ'**
**ರಾಜ್ಯದ ಆಡಳಿತ ವ್ಯವಸ್ಥೆ ಸಂಪೂರ್ಣವಾಗಿ ಒಂದೇ ವ್ಯಕ್ತಿಯ ಕೈಯಲ್ಲಿ ಕೇಂದ್ರೀಕೃತವಾಗಿದೆ ಎಂದು ಆರೋಪಿಸಿದ ಅವರು, "ಇಂದು ಆಡಳಿತ ಎಂದರೆ ಡಿ.ಕೆ. ಶಿವಕುಮಾರ್ ಎಂಬ ಪರಿಸ್ಥಿತಿ ನಿರ್ಮಾಣವಾಗಿದೆ. ಇಷ್ಟೊಂದು ದಿನಗಳಾದರೂ ಸಚಿವ ಸಂಪುಟ ವಿಸ್ತರಣೆ ಆಗದಿರುವುದು ರಾಜ್ಯದ ಆಡಳಿತ ವ್ಯವಸ್ಥೆಗೆ ಅತ್ಯಂತ ದುರದೃಷ್ಟಕರ ಬೆಳವಣಿಗೆ," ಎಂದು ವಾಗ್ದಾಳಿ ನಡೆಸಿದರು.**

# ಹಡಪದ ಅಪ್ಪಣ್ಣನವರು ಪ್ರಾಮಾಣಿಕ ಕಾಯಕದ ಮಹತ್ವವನ್ನು ತೋರಿಸಿಕೊಟ್ಟ ಶರಣ- ಎಂ ಪ್ರತಿಭಾ




ಕೊಟ್ಟೂರು : ತಾಲೂಕಿನ ತಾಲೂಕು ಕಛೇರಿಯ ಮಹಾತ್ಮ ಗಾಂಧೀಜಿ ಸಭಾಂಗಣದಲ್ಲಿ ಇಂದು ಶಿವಶರಣ ಹಡಪದ ಅಪ್ಪಣ್ಣನವರ ಜಯಂತಿ ಕಾರ್ಯಕ್ರಮವವನ್ನು ಆಚರಿಸಲಾಯಿತು. ಗ್ರೇಡ್-2 ತಹಶೀಲ್ದಾರರಾದ ಎಂ ಪ್ರತಿಭಾ ಅಪ್ಪಣ್ಣನವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡುತ್ತಾ, 12ನೇ ಶತಮಾನದ ಸಾಮಾಜಿಕ ಕ್ರಾಂತಿಯ ಗುರುತಾಗಿದ್ದ ಅನುಭವ ಮಂಟಪದ ರುವಾರಿ ವಿಶ್ವಗುರು ಬಸವಣ್ಣನವರ ಆಪ್ತ ಕಾರ್ಯದರ್ಶಿಯಾಗಿದ್ದ ಅಪ್ಪಣ್ಣನವರು ಪ್ರಮುಖ ಶರಣರಾಗಿದ್ದು, ಪ್ರಾಮಾಣಿಕ ಕಾಯಕ ಮತ್ತು ದಾಸೋಹದ ಮಹತ್ವದ ಬಗ್ಗೆ ತಮ್ಮ ವಚನಗಳ ಮೂಲಕ ತಿಳಿಸಿದ್ದಾರೆ. ಸುಮಾರು 250 ವಚನಗಳು ಲಭ್ಯವಿದ್ದು, ಇವರ ಪತ್ನಿ ಲಿಂಗಮ್ಮನು ಸಹಾ ವಚನಗಳನ್ನು ರಚಿಸಿದ್ದಾರೆ.

ಅಂದು ಸಮಾಜದಲ್ಲಿದ್ದ ಮೂಢ ನಂಬಿಕೆಯನ್ನು ಹೋಗಲಾಡಿಸಲು ಬಸವಣ್ಣನವರು ತಮ್ಮನ್ನು ಭೇಟಿಯಾಗಲು ಯಾರಾದರೂ ಬಂದರೆ ಮೊದಲು ಅಪ್ಪಣ್ಣನನ್ನು ನೋಡಿಕೊಂಡು ಬರುವಂತೆ ತಿಳಿಸುತ್ತಿದ್ದರು. ಒಬ್ಬ ಕಾರ್ಯದರ್ಶಿ ಹೇಗಿರಬೇಕೆನ್ನುವುದಕ್ಕೆ ಅಪ್ಪಣ್ಣನವರು ಉದಾಹರಣೆಯಾಗಿದ್ದರು. ಇಂತಹ ಶಿವ ಶರಣರು ತಮ್ಮ ಬದುಕಿನ ಮೂಲಕ, ವಚನಗಳ ಮೂಲಕ ಸಮಾಜಕ್ಕೆ ನೀಡಿದ ಸಂದೇಶಗಳನ್ನು ನಾವು ಪಾಲಿಸಿಕೊಂಡು ಹೋಗಬೇಕು ಎಂದರು.

ಕಾರ್ಯಕ್ರಮದಲ್ಲಿ ಹಡಪದ ಸಮಾಜದ ಮುಖಂಡರಾದ ಅಪ್ಪಾಜಿ, ಗುರುಬಸವರಾಜ, ವಿಕ್ರಮ, ಚನ್ನಪ್ಪ, ನಾಗರಾಜ, ಬಸವರಾಜ, ಅಜ್ಜಯ್ಯ, ರವಿ ಕುಮಾರ ಇಸಿಓ ಸಿ.ನಿಂಗಪ್ಪ, ಗ್ರಾಮ ಆಡಳಿತ ಅಧಿಕಾರಿ ಹರೀಶ ಮುಂತಾದವರು ಇದ್ದರು. ಸಿ ಮ ಗುರುಬಸವರಾಜ ಸ್ವಾಗತಿಸಿ ನಿರೂಪಿಸಿದರು.

ಪ್ರಿಯ ಓದುಗರೇ ನಮ್ಮ
ಅನಂತ ಜನಶಕ್ತಿ
ಕನ್ನಡ ದಿನ ಪತ್ರಿಕೆಯನ್ನು ತಪ್ಪದೇ ಓದಿರಿ

# ಹಗರಿಬೊಮ್ಮನಹಳ್ಳಿಯಲ್ಲಿ ಕಾಂಗ್ರೆಸ್ ಸಂಘಟನೆ ಬಲವರ್ಧನೆಗೆ ಮಹತ್ವದ ಸಭೆ ಇಂದು

ಹಗರಿಬೊಮ್ಮನಹಳ್ಳಿ : ಹಗರಿಬೊಮ್ಮನಹಳ್ಳಿ ಬ್ಲಾಕ್ ಕಾಂಗ್ರೆಸ್ ಸಮಿತಿಯ ವತಿಯಿಂದ ಇಂದು ಮಧ್ಯಾಹ್ನ 3:00 ಗಂಟೆಗೆ ಕಾಂಗ್ರೆಸ್ ಸಂಘಟನೆಯನ್ನು ಬಲಪಡಿಸುವ ಉದ್ದೇಶದಿಂದ ಮಹತ್ವದ ಸಭೆಯನ್ನು ಆಯೋಜಿಸಲಾಗಿದೆ.

ಸಭೆಯಲ್ಲಿ ಕೆಎಂಎಫ್ ನಿಕಟ ಪೂರ್ವ ಅಧ್ಯಕ್ಷರು ಹಾಗೂ ಮಾಜಿ ಶಾಸಕರಾದ ಶ್ರೀ ಭೀಮನಾಯ್ಕ್ ಅವರು, ಎಐಸಿಸಿ ವೀಕ್ಷಕರಾದ ಹರ್ಕರ ವೇಣುಗೋಪಾಲ್ ರಾವ್ ಅವರು ಹಾಗೂ ಕೆಪಿಸಿಸಿ ವೀಕ್ಷಕರು ಭಾಗವಹಿಸಲಿದ್ದಾರೆ.

ಸಂಘಟನಾ ಸೃಜನ್ ಅಭಿಯಾನದ ಅಂಗವಾಗಿ ನಡೆಯಲಿರುವ ಈ ಸಭೆಯಲ್ಲಿ ಹಗರಿಬೊಮ್ಮನಹಳ್ಳಿ ಕ್ಷೇತ್ರದ ಕಾಂಗ್ರೆಸ್ ಸಂಘಟನೆಯ ಬಲವರ್ಧನೆ, ಪಕ್ಷದ ಚಟುವಟಿಕೆಗಳು ಹಾಗೂ ಜಿಲ್ಲಾ ಕಾಂಗ್ರೆಸ್ ಸಮಿತಿಗೆ ಸಂಬಂಧಿಸಿದ ಪ್ರಮುಖ ವಿಷಯಗಳ ಕುರಿತು ಚರ್ಚೆ ನಡೆಯಲಿದೆ.

ಸಭೆಗೆ ಬ್ಲಾಕ್ ಕಾಂಗ್ರೆಸ್ ಸಮಿತಿಯ ಎಲ್ಲಾ ಪದಾಧಿಕಾರಿಗಳು, ಮಹಿಳಾ ಕಾಂಗ್ರೆಸ್ ಪದಾಧಿಕಾರಿಗಳು, BLA-2 ಸದಸ್ಯರು, ಪುರಸಭೆ ಹಾಗೂ ಪಟ್ಟಣ ಪಂಚಾಯತ್ ಅಧ್ಯಕ್ಷರು, ಉಪಾಧ್ಯಕ್ಷರು ಮತ್ತು ಸದಸ್ಯರು, ಕೆಪಿಸಿಸಿ ಪದಾಧಿಕಾರಿಗಳು, ಮಾಜಿ ಜಿಲ್ಲಾ ಪಂಚಾಯತ್ ಹಾಗೂ ತಾಲೂಕು ಪಂಚಾಯತ್ ಸದಸ್ಯರು, ಮಾಜಿ ಗ್ರಾಮ ಪಂಚಾಯತ್ ಅಧ್ಯಕ್ಷರು, ಉಪಾಧ್ಯಕ್ಷರು ಮತ್ತು ಸದಸ್ಯರು, ಕಾಂಗ್ರೆಸ್‌ನ ವಿವಿಧ ಮುಂಚೂಣಿ ಘಟಕಗಳ ಅಧ್ಯಕ್ಷರು, ಗ್ಯಾರಂಟಿ ಪ್ರಾಧಿಕಾರದ ಅಧ್ಯಕ್ಷರು ಹಾಗೂ ಪದಾಧಿಕಾರಿಗಳು, ಸರ್ಕಾರದ ನಾಮನಿರ್ದೇಶಿತ ಸದಸ್ಯರು, ಹಿರಿಯ ಮುಖಂಡರು ಮತ್ತು ಕಾರ್ಯಕರ್ತರು ಕಡ್ಡಾಯವಾಗಿ ಭಾಗವಹಿಸುವಂತೆ ಮನವಿ ಮಾಡಲಾಗಿದೆ.

ಸಭೆಯನ್ನು ಯಶಸ್ವಿಗೊಳಿಸಲು ಎಲ್ಲರೂ ಸಮಯಕ್ಕೆ ಸರಿಯಾಗಿ ಹಾಜರಾಗುವಂತೆ ಹಗರಿಬೊಮ್ಮನಹಳ್ಳಿ ಬ್ಲಾಕ್ ಕಾಂಗ್ರೆಸ್ ಸಮಿತಿ ಅಧ್ಯಕ್ಷರು ಹಾಗೂ ವಕೀಲರಾದ ಕೋರಿ ಗೋಣಿಬಸಪ್ಪ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ನಾಳೆ ನೇರ ಸಂದರ್ಶನ

ವಿಜಯನಗರ : ಜಿಲ್ಲಾ ಉದ್ಯೋಗ ವಿನಿಮಯ ಕಚೇರಿ ವತಿಯಿಂದ ಇದೇ ಜುಲೈ 31ರಂದು ಬೆಳಿಗ್ಗೆ 10ಗಂಟೆಗೆ ನಗರದ ಎಂಪಿ ಪ್ರಕಾಶ್ ನಗರ, ಶಂಕರ ಕಾಲೋನಿಯ ಭಾರತ್ ಫೈನಾನ್ಸಿಯಲ್ ಇನ್‌ಕ್ಲೂಷನ್ ಲಿಮಿಟೆಡ್‌ನಲ್ಲಿ ಖಾಸಗಿ ಸಂಸ್ಥೆಯಲ್ಲಿ ಖಾಲಿಯಿರುವ 20 ಕಸ್ಟಮರ್ ರಿಲೇಷನ್ಶಿಪ್ ಹುದ್ದೆಗಳಿಗೆ ನೇರ ಸಂದರ್ಶನ ಹಮ್ಮಿಕೊಳ್ಳಲಾಗಿದೆ.

ಈ ನೇರ ಸಂದರ್ಶನದಲ್ಲಿ ಪಿಯುಸಿ ಮತ್ತು ಯಾವುದೇ ಪದವಿ ಪಡೆದ ಪುರುಷರು ಹಾಗೂ ಮಹಿಳೆಯರು ಭಾಗವಹಿಸಬಹುದು. ಭಾಗವಹಿಸಲು ಯಾವುದೇ ಶುಲ್ಕ ಇರುವುದಿಲ್ಲ. ಅಭ್ಯರ್ಥಿಗಳು ಕಡ್ಡಾಯವಾಗಿ ದ್ವಿಚಕ್ರ ವಾಹನ ಹೊಂದಿರಬೇಕು. ಆಸಕ್ತ ಅಭ್ಯರ್ಥಿಗಳು ಆಧಾರ್ ಕಾರ್ಡ್ ಪ್ರತಿ ಹಾಗೂ ಸ್ವ-ವಿವರ ಪ್ರತಿಯೊಂದಿಗೆ ಹಾಜರಾಗಬೇಕು.

ಹೆಚ್ಚಿನ ಮಾಹಿತಿಗಾಗಿ ಬಳ್ಳಾರಿ ಜಿಲ್ಲಾ ಉದ್ಯೋಗ ವಿನಿಮಯ ಕಚೇರಿ ದೂರವಾಣಿ ಸಂಖ್ಯೆ: 7619207762, 9663263086, 7676774293, 6360408094 ಗೆ ಸಂಪರ್ಕಿಸಬಹುದು ಎಂದು ಪ್ರಕಟಣೆ ತಿಳಿಸಿದೆ.

# ಹಡಪದ ಅಪ್ಪಣ್ಣ & ಬಸವಣ್ಣನವರ ತತ್ವಗಳು ದಾರಿದೀಪ



ದಾವಣಗೆರೆ : ಸಾಮಾಜಿಕ ಬದಲಾವಣೆ ಮತ್ತು ನೆಮ್ಮದಿಯ ಜೀವನಕ್ಕೆ ವಚನ ಸಾಹಿತ್ಯ ಹಾಗೂ ಬಸವಣ್ಣನವರ ತತ್ವಗಳನ್ನು ಅಳವಡಿಸಿಕೊಳ್ಳುವುದು ಅತ್ಯಗತ್ಯ ಎಂದು ಜಿಲ್ಲಾಧಿಕಾರಿ ಗಂಗಾಧರಸ್ವಾಮಿ ಜಿ.ಎಂ ಅವರು ತಿಳಿಸಿದರು. ಅವರು ಬುಧವಾರ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ ಮತ್ತು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಯೋಗದಲ್ಲಿ ಏರ್ಪಡಿಸಿದ್ದ ಹಡಪದ ಅಪ್ಪಣ್ಣ ಜಯಂತಿ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದರು. ನಮಗೆ ವಚನ ಸಾಹಿತ್ಯದ ಆಳ-ಅಗಲಗಳ ಅರಿವು ಹಡಪದ ಅಪ್ಪಣ್ಣನವರ ವಿಚಾರಗಳನ್ನು ತಿಳಿದಾಗ ಸ್ಪಷ್ಟವಾಗುತ್ತದೆ. ಬಸವಣ್ಣನವರ ಎತ್ತರಕ್ಕೆ ನಿಲ್ಲಬಲ್ಲ ಮಹಾನ್ ವ್ಯಕ್ತಿತ್ವ ಅವರದ್ದು. ಅಲ್ಲಮಪ್ರಭು ಹಾಗೂ ಬಸವಣ್ಣನವರಂತಹ ದೈತ್ಯ ಪ್ರತಿಭೆಗಳೊಂದಿಗೆ ಸರಿಸಾಟಿಯಾಗಿ ನಿಂತು ಕಾರ್ಯನಿರ್ವಹಿಸುವುದು ಸಾಮಾನ್ಯ ವಿಷಯವಲ್ಲ ಎಂದು ಬಣ್ಣಿಸಿದರು.

ಬಸವಣ್ಣನವರ "ನಿಮ್ಮ ನಿಮ್ಮ ಮನವನ್ನು ಸಂತೈಸಿಕೊಳ್ಳಿ" ಎಂಬ ನುಡಿಯಂತೆ ನಾವು ಸದಾ ಇತರರ ತಪ್ಪುಗಳನ್ನು ಹುಡುಕುವುದರಲ್ಲೇ ಕಾಲ ಕಳೆಯುತ್ತಿದ್ದೇವೆ. ಬದಲಾಗಿ ನಿಸ್ವಾರ್ಥವಾಗಿ ಬದುಕುವುದನ್ನು ಕಲಿಯಬೇಕು. ಜೀವನದಲ್ಲಿ ಕನಿಷ್ಠ ಐದು ವಚನಗಳನ್ನು ಅಕ್ಷರಶಃ ಅಳವಡಿಸಿಕೊಂಡರೂ ಸಮಾಜಕ್ಕೆ ದೊಡ್ಡ ಕೊಡುಗೆ ನೀಡಿದಂತಾಗುತ್ತದೆ ಎಂದರು.

ಒಂದನೇ ಪುಟದಿಂದ..

# ಕಲ್ಲಿದ್ದಲು ಹಗರಣ; ಮನಮೋಹನ್ ಸಿಂಗ್‌ಗೆ ಸುಪ್ರೀಂ ಕ್ಲೀನ್ ಚಿಟ್

ಮೇಲ್ಮನವಿಯನ್ನು ಅನುಮತಿಸುತ್ತೇವೆ ಮತ್ತು ಆಕ್ಷೇಪಾರ್ಹ ತೀರ್ಪನ್ನು ರದ್ದುಗೊಳಿಸುತ್ತೇವೆ. ಪರಿಣಾಮವಾಗಿ, ನಾವು ಸಿಬಿಐನ ಮುಕ್ತಾಯ ವರದಿಗಳನ್ನು ಸ್ವೀಕರಿಸುತ್ತೇವೆ ಮತ್ತು ವಿಷಯವನ್ನು ಮುಕ್ತಾಯಗೊಳಿಸುತ್ತೇವೆ, ”ಎಂದು ಪೀಠ ಹೇಳಿದೆ.

2005 ರಲ್ಲಿ ಒಡಿಶಾದ ತಲಬಿರಾ-ಖಖ ಕಲ್ಲಿದ್ದಲು ನಿಕ್ಷೇಪ ಹಂಚಿಕೆಗೆ ಸಂಬಂಧಿಸಿದ ಕಲ್ಲಿದ್ದಲು ಹಗರಣ ಪ್ರಕರಣದಲ್ಲಿ ಸಿಂಗ್, ಕೈಗಾರಿಕೋದ್ಯಮಿ ಕುಮಾರ್ ಮಂಗಲಂ ಬಿರ್ಲಾ, ಮಾಜಿ ಕಲ್ಲಿದ್ದಲು ಕಾರ್ಯದರ್ಶಿ ಪಿ ಸಿ ಪರಾಖ್ ಮತ್ತು ಇತರ ಮೂವರನ್ನು ವಿಶೇಷ ನ್ಯಾಯಾಲಯ ಆರೋಪಿಗಳನ್ನಾಗಿ ಸಮನ್ಸ್ ನೀಡಿತ್ತು. ಆದಾಗ್ಯೂ, ಸುಪ್ರೀಂ ಕೋರ್ಟ್ ಮಧ್ಯಪ್ರವೇಶಿಸಿ ನಿರ್ದೇಶನವನ್ನು ತಡೆಹಿಡಿದಿತ್ತು. ತಮ್ಮಂತಹ ಸಾರ್ವಜನಿಕ ಅಧಿಕಾರಿಗಳ ವಿರುದ್ಧ ಕಾನೂನು ಕ್ರಮ ಜರುಗಿಸಲು ಕಡ್ಡಾಯ ಅನುಮತಿ ಇಲ್ಲದಿರುವುದನ್ನು ಸಿಂಗ್ ಪ್ರಶ್ನಿಸಿದ್ದರು ಮತ್ತು ಕಲ್ಲಿದ್ದಲು ನಿಕ್ಷೇಪ ಹಂಚಿಕೆಗೆ ಸಂಬಂಧಿಸಿದ ಅವರ ನಿರ್ಧಾರದಲ್ಲಿ ಯಾವುದೇ ಅಪರಾಧವಿಲ್ಲ ಎಂದು ನಿರಾಕರಿಸಿದ್ದರು. ವಿಶೇಷ ಸಿಬಿಐ ನ್ಯಾಯಾಧೀಶ ಭರತ್ ಪರಾಶರ್ ಅವರು ಐಪಿಸಿಯ ಸೆಕ್ಷನ್ 120 ಬಿ (ಕ್ರಿಮಿನಲ್ ಪಿತೂರಿ) ಮತ್ತು 409 (ಸಾರ್ವಜನಿಕ ಸೇವಕ, ಅಥವಾ ಬ್ಯಾಂಕರ್, ವ್ಯಾಪಾರಿ ಅಥವಾ ಏಜೆಂಟ್‌ನಿಂದ ಕ್ರಿಮಿನಲ್ ನಂಬಿಕೆ ಉಲ್ಲಂಘನೆ) ಮತ್ತು ಭ್ರಷ್ಟಾಚಾರ ತಡೆ ಕಾಯ್ದೆಯ (ಪಿಸಿಎ) ನಿಬಂಧನೆಗಳ ಅಡಿಯಲ್ಲಿ ಶಿಕ್ಷಾರ್ಹವಾದ ಆರೋಪದ ಅಪರಾಧಗಳಿಗಾಗಿ ಆರು ಆರೋಪಿಗಳಿಗೆ ಸಮನ್ಸ್ ನೀಡಿದ್ದರು. ಈ ಮೂವರಲ್ಲದೆ, ಮೆಸ್ಸರ್ಸ್ ಹಿಂಡಾಲ್ಕೋ, ಅದರ ಅಧಿಕಾರಿಗಳಾದ ಶುಭೇಂದು ಅಮಿತಾಭ್ ಮತ್ತು ಡಿ ಭಟ್ಟಾಚಾರ್ಯ ಅವರನ್ನು ಪ್ರಕರಣದಲ್ಲಿ ಆರೋಪಿಗಳನ್ನಾಗಿ ಮಾಡಲಾಗಿದೆ. ಈ ಪ್ರಕರಣ 2005 ರಲ್ಲಿ ಒಡಿಶಾದ ತಲಬಿರಾ ಖಖ ಕಲ್ಲಿದ್ದಲು ನಿಕ್ಷೇಪವನ್ನು ಮೆಸರ್ಸ್ ಹಿಂಡಾಲ್ಕೋಗೆ ಹಂಚಿಕೆ ಮಾಡಿದ್ದಕ್ಕೆ ಸಂಬಂಧಿಸಿದೆ,

ಆಗ ಪ್ರಧಾನಿಯಾಗಿದ್ದ ಸಿಂಗ್ ಕಲ್ಲಿದ್ದಲು ಖಾತೆಯನ್ನು ಹೊಂದಿದ್ದರು. ಸಿಬಿಐ ತನ್ನ ಎಫ್‌ಐಆರ್‌ನಲ್ಲಿ ಪರಾಖ್, ಬಿರ್ಲಾ, ಮೆಸರ್ಸ್ ಹಿಂಡಾಲ್ಕೋ ಇಂಡಸ್ಟ್ರೀಸ್ ಲಿಮಿಟೆಡ್ ಮತ್ತು ಇತರ ಅಪರಿಚಿತ ವ್ಯಕ್ತಿಗಳನ್ನು ಐಪಿಸಿಯ ಸೆಕ್ಷನ್ 120-ಬಿ (ಕ್ರಿಮಿನಲ್ ಪಿತೂರಿ) ಅಡಿಯಲ್ಲಿ ಮತ್ತು ಪಿಸಿಎ ನಿಬಂಧನೆಗಳ ಅಡಿಯಲ್ಲಿ ಆರೋಪಿಸಲಾಗಿದೆ. ಆದಾಗ್ಯೂ, ಸಂಸ್ಥೆ ನಂತರ ನ್ಯಾಯಾಲಯಕ್ಕೆ ಮುಕ್ತಾಯ ವರದಿಯನ್ನು ಸಲ್ಲಿಸಿತ್ತು, ಆದರೆ ಅದನ್ನು ಸ್ವೀಕರಿಸಲು ನಿರಾಕರಿಸಿತ್ತು. ನ್ಯಾಯಾಲಯ ಮಾಜಿ ಪ್ರಧಾನಿ ಸಿಂಗ್ ಮತ್ತು ಸಿಂಗ್ ಅವರ ಆಗಿನ ಪ್ರಧಾನ ಕಾರ್ಯದರ್ಶಿ ಟಿ ಕೆ ಎ ನಾಯರ್ ಮತ್ತು ಆಗಿನ ಖಾಸಗಿ ಕಾರ್ಯದರ್ಶಿ ಬಿ ವಿ ಆರ್ ಸುಬ್ರಮಣ್ಯಂ ಸೇರಿದಂತೆ ಅಂದಿನ ಪ್ರಧಾನಿ ಕಚೇರಿಯ (ಪಿಎಂಒ) ಕೆಲವು ಉನ್ನತ ಅಧಿಕಾರಿಗಳನ್ನು ವಿಚಾರಣೆಗೆ ಒಳಪಡಿಸುವಂತೆ ಸಿಬಿಐಗೆ ನಿರ್ದೇಶಿಸಿತ್ತು.

# ಪ್ರಶ್ನೆಪತ್ರಿಕೆ ಸೋರಿಕೆ ಜಾಲ ನಿರ್ಮೂಲನೆಯೇ ತಿದ್ದುಪಡಿ ಮಸೂದೆಯ ಗುರಿ;

ನಿರ್ಮೂಲನೆಗೊಳಿಸಲು ಕಟಿಬದ್ಧವಾಗಿದೆ ಎಂದು ಪ್ರಲ್ಹಾದ್ ಜೋಶಿ ಹೇಳಿದ್ದಾರೆ. ದೇಶಾದ್ಯಂತ ಪರೀಕ್ಷಾ ವ್ಯವಸ್ಥೆಯಲ್ಲಿ ಪಾರದರ್ಶಕತೆ, ವಿಶ್ವಾಸಾರ್ಹತೆ ಮತ್ತು ನ್ಯಾಯಸಮ್ಮತತೆಯನ್ನು ಮತ್ತಷ್ಟು ಬಲಪಡಿಸುವ ಗುರಿ ಹೊಂದಿದೆ ಎಂದು ಸ್ಪಷ್ಟಪಡಿಸಿದ್ದಾರೆ.

“ಪರೀಕ್ಷಾ ಅಕ್ರಮಗಳನ್ನು ಮಟ್ಟಹಾಕಲು ಕಠಿಣ ಕಾನೂನು ಚೌಕಟ್ಟನ್ನು ತರುವ ಸಾರ್ವಜನಿಕ ಪರೀಕ್ಷೆಗಳ (ಅಕ್ರಮ ತಡೆ) ತಿದ್ದುಪಡಿ ವಿಧೇಯಕವನ್ನು ಲೋಕಸಭೆಯು ಅಂಗೀಕರಿಸಿದೆ. ಈ ವಿಧೇಯಕವು ಪರೀಕ್ಷಾ ಅಕ್ರಮದ ಜಾಲವನ್ನು ನಿರ್ಮೂಲನೆ ಮಾಡುವ ಮತ್ತು ಪರೀಕ್ಷಾ ಪ್ರಕ್ರಿಯೆಯಲ್ಲಿ ಪಾರದರ್ಶಕತೆ, ವಿಶ್ವಸನೀಯತೆ ಹಾಗೂ ನ್ಯಾಯಸಮ್ಮತತೆಯನ್ನು ಹೆಚ್ಚಿಸುವ ಗುರಿಯನ್ನು ಹೊಂದಿದೆ” ಎಂದು ಅವರು ತಿಳಿಸಿದ್ದಾರೆ.

ಕೇಂದ್ರ ಸರ್ಕಾರವು ದೇಶಾದ್ಯಂತ ನಡೆಯುವ ಸ್ಪರ್ಧಾತ್ಮಕ ಮತ್ತು ಪ್ರವೇಶ ಪರೀಕ್ಷೆಗಳಲ್ಲಿ ಪಾರದರ್ಶಕತೆ ತರಲು ಹಾಗೂ ಪರೀಕ್ಷಾ ಅಕ್ರಮ ಅಥವಾ ಪ್ರಶ್ನೆ ಪತ್ರಿಕೆ ಸೋರಿಕೆಯನ್ನು ತಡೆಯಲು ಸಾರ್ವಜನಿಕ ಪರೀಕ್ಷೆಗಳ (ಅಕ್ರಮ ತಡೆ) ತಿದ್ದುಪಡಿ ವಿಧೇಯಕ, 2026 ಅನ್ನು ಸಂಸತ್ತಿನಲ್ಲಿ ಅಂಗೀಕರಿಸಿದೆ.

ಈ ವಿಧೇಯಕದ ಮುಖ್ಯ ಉದ್ದೇಶಗಳೆಂದರೆ, ಪ್ರವೇಶ ಪರೀಕ್ಷೆಗಳು ಹಾಗೂ ನೇಮಕಾತಿ ಪರೀಕ್ಷೆಗಳ ಪ್ರಶ್ನೆ ಪತ್ರಿಕೆಗಳು ಸೋರಿಕೆಯಾಗುವುದನ್ನು ತಡೆಯುವುದು. ಪರೀಕ್ಷಾ ಅಕ್ರಮ ನಡೆಸುವ ಸೈಬರ್ ಕ್ರೈಮ್ ಜಾಲ, ಕೋಚಿಂಗ್ ಸೆಂಟರ್‌ಗಳು ಮತ್ತು ಪ್ರಭಾವಿ ಸಿಂಡಿಕೇಟ್‌ಗಳ ವಿರುದ್ಧ ಕಠಿಣ ಕ್ರಮ ಕೈಗೊಳ್ಳುವುದು. ಕಷ್ಟಪಟ್ಟು ಓದುವ ಪ್ರಾಮಾಣಿಕ ವಿದ್ಯಾರ್ಥಿಗಳಿಗೆ ಮತ್ತು ಅಭ್ಯರ್ಥಿಗಳಿಗೆ ನ್ಯಾಯ ಒದಗಿಸುವುದು.

# ಬರದ ನಡುವೆಯೂ ಕೃಷಿ ಸಚಿವರಿಲ್ಲ’

ಎಂದು ಟೀಕಿಸಿದ ಯತ್ನಾಳ, "ರಾಜ್ಯದ ಅನೇಕ ಇಲಾಖೆಗಳಲ್ಲಿ ಸಚಿವರಿಲ್ಲದ ಕಾರಣ ಸಾವಿರಾರು ಕಡತಗಳು ವಿಲೇವಾರಿಯಾಗದೆ ಬಾಕಿ ಉಳಿದಿವೆ. ಅಧಿಕಾರಿಗಳೂ 'ಸಚಿವರಿಲ್ಲ' ಎಂಬ ನೆಪ ಹೇಳಿ ನಿರ್ಧಾರಗಳನ್ನು ಮುಂದೂಡುತ್ತಿದ್ದಾರೆ," ಎಂದು ಆರೋಪಿಸಿದರು.

ಯಾವುದೇ ಸರ್ಕಾರ ಅಧಿಕಾರಕ್ಕೆ ಬಂದ ತಕ್ಷಣ ಪೂರ್ಣ ಪ್ರಮಾಣದ ಸಚಿವ ಸಂಪುಟವನ್ನು ರಚಿಸಬೇಕು. ಆದರೆ ಇಲ್ಲಿ ಪ್ರತಿದಿನವೂ ಲಾಬಿ, ಓಡಾಟ ಮತ್ತು ಅಧಿಕಾರದ ಲೆಕ್ಕಾಚಾರವೇ ನಡೆ-ಯುತ್ತಿದೆ ಎಂದು ಅವರು ಅಸಮಾಧಾನ ವ್ಯಕ್ತಪಡಿಸಿದರು.

# ದೇವಾಲಯಗಳಲ್ಲಿ ಹುಂಡಿ ಎಣಿಕೆ ಕಡ್ಡಾಯ

ಮಾಡಬೇಕು ಎಂದು ತಿಳಿಸಿದರು.

ಹುಂಡಿ ಎಣಿಕೆ ಸಂದರ್ಭದಲ್ಲಿ ದೊರೆಯುವ ಚಿನ್ನ, ಬೆಳ್ಳಿ ಹಾಗೂ ಇತರೆ ಮೌಲ್ಯಯುತ ವಸ್ತುಗಳನ್ನು ಎಣಿಕೆಯ ದಿನದಂದೇ ಪ್ರಮಾಣೀಕೃತ ಮೌಲ್ಯಮಾಪಕರಿಂದ ಮೌಲ್ಯಮಾಪನ ಮಾಡಿಸಬೇಕು. ಹಣಕಾಸಿನ ನಿರ್ವಹಣೆ ಹಾಗೂ ಲೆಕ್ಕಪರಿಶೋಧನೆ ಪೂರ್ಣಗೊಳಿಸಿ ವರದಿಯೊಂದಿಗೆ ಉಪ ಖಜಾನೆಗೆ ಜಮಾ ಮಾಡಬೇಕು.

ಡಿಜಿಟಲ್ ಪಾವತಿ ಹಾಗೂ ಕ್ಯೂಆರ್ ಕೋಡ್ ವ್ಯವಸ್ಥೆ:

ಜೇಬುಗಳ್ಳತನ ಹಾಗೂ ನಗದು ದುರುಪಯೋಗ ತಡೆಯಲು ಭಕ್ತಾದಿಗಳಿಗೆ ಡಿಜಿಟಲ್ ಪಾವತಿಗೆ ಹೆಚ್ಚಿನ ಪ್ರೋತ್ಸಾಹ ನೀಡಲಾಗುವುದು. ದೇವಾಲಯಗಳಲ್ಲಿ ಅಧಿಕೃತ ಕ್ಯೂಆರ್ ಕೋಡ್ ಅಳವಡಿಸಬೇಕು. ಈ ಕ್ಯೂಆರ್ ಕೋಡ್‌ಗಳು ಹಾಳಾಗದಂತೆ ಹಾಗೂ ದುರುಪಯೋಗವಾಗದಂತೆ ಕಾಲಕಾಲಕ್ಕೆ ಪರಿಶೀಲಿಸಿ ರಕ್ಷಣೆ ಮಾಡಲು ಸೂಚಿಸಿದರು. ಅಗ್ನಿಶಾಮಕ ಉಪಕರಣ ಹಾಗೂ ಸಿಬ್ಬಂದಿಗೆ ತರಬೇತಿ: ಎ ಮತ್ತು ಬಿ ದರ್ಜೆಯ ದೇವಾಲಯಗಳ ಹುಂಡಿ ಎಣಿಕೆ ಕೊಠಡಿ ಹಾಗೂ ದೇವಾಲಯದ ಆವರಣದಲ್ಲಿ ಅಗ್ನಿ ಅವಘಡ ತಡೆಯಲು ಅಗತ್ಯ ಕ್ರಮ ಕೈಗೊಳ್ಳಬೇಕು ಎಂದು ತಿಳಿಸಿದ ಅವರು, ಹುಂಡಿ ಎಣಿಕೆ ಸಮಯದಲ್ಲಿ ಅಥವಾ ಸಾಮಾನ್ಯ ದಿನಗಳಲ್ಲಿ ಕಳವು ಪ್ರಕರಣಗಳು ಕಂಡುಬಂದಲ್ಲಿ, ಸಂಬಂಧಪಟ್ಟ ದೇವಾಲಯದ ಕಾರ್ಯನಿರ್ವಾಹಕ ಅಧಿಕಾರಿಗಳು ಸಂಬಂಧಪಟ್ಟ ಅಧಿಕಾರಿಗಳನ್ನೇ ನೇರ ಹೊಣೆಗಾರರನ್ನಾಗಿ ಮಾಡಿ ಶಿಸ್ತುಕ್ರಮ ಜರುಗಿಸಲಾಗುವುದು ಎಂದು ಎಚ್ಚರಿಕೆ ನೀಡಿದರು. ಅಧಿಸೂಚಿತ ದೇವಾಲಯಗಳಿಗೆ ಸೇರಿದ ಜಮೀನು ಹಾಗೂ ಸ್ಥಿರಾಸ್ತಿಗಳ ಸರ್ವೇ ಅಳತೆ ಕಾರ್ಯವನ್ನು ಪೂರ್ಣಗೊಳಿಸಿ, ಎಲ್ಲಾ ಆಸ್ತಿ, ಜಮೀನುಗಳ ಖಾತೆಗಳನ್ನು ಕಡ್ಡಾಯವಾಗಿ ದೇವಸ್ಥಾನದ ಹೆಸರಿಗೆ ಇಂದೀಕರಣ ಮಾಡುವಂತೆ ತಾಕೀತು ಮಾಡಿದರು.

ಈ ಸಂದರ್ಭದಲ್ಲಿ ಅಪರ ಜಿಲ್ಲಾಧಿಕಾರಿ ಈ. ಬಾಲಕೃಷ್ಣ, ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಮಂಜುನಾಥ್, ಸಹಾಯಕ ಆಯುಕ್ತ ಪಿ.ವಿವೇಲಕಾನಂದ, ಜಿಲ್ಲಾ ನಗರಾಭಿವೃದ್ಧಿಕೋಶದ ಯೋಜನಾ ನಿರ್ದೇಶಕ ಮನೋಹರ್, ಹಿಂದೂ ಧಾರ್ಮಿಕ ಧತ್ತಿ ಇಲಾಖೆ ಸಹಾಯಕ ಆಯುಕ್ತರಾದ ಸವಿತಾ ಸೇರಿದಂತೆ ಮತ್ತಿತರರು ಇದ್ದರು.

# ಅಯೋಧ್ಯಾ ರಾಮ ಮಂದಿರ ಟ್ರಸ್ಟ್‌ಗೆ ಹೊಸ ಕಾರ್ಯದರ್ಶಿ ನೇಮಕ

ಸ್ವಯಂಸೇವಕರಾಗಿರುವ ಅಪ್ಲೆ, ವಿದೇಶದಿಂದ ನಿವೃತ್ತರಾಗಿ ಮರಳಿದ ನಂತರ ರಾಮಮಂದಿರ ನಿರ್ಮಾಣ ಆರಂಭವಾದ ದಿನದಿಂದಲೂ ಯಾವುದೇ ವೇತನ ಪಡೆಯದೇ ಯೋಜನಾ ವ್ಯವಸ್ಥಾಪಕರಾಗಿ ಕಾರ್ಯನಿರ್ವಹಿಸುತ್ತಿದ್ದಾರೆ. ಪ್ರಸ್ತುತ ಅವರು ತಮ್ಮ ಪತ್ನಿಯೊಂದಿಗೆ ಅಯೋಧ್ಯೆಯ ತೀರ್ಥ ಕ್ಷೇತ್ರ ಭವನದಲ್ಲೇ ನೆಲೆಸಿದ್ದಾರೆ.

ಜುಲೈ 6 ರಂದು ಟ್ರಸ್ಟ್‌ನ ಪ್ರಧಾನ ಕಾರ್ಯದರ್ಶಿ ಚಂಪತ್ ರಾಯ್ ಮತ್ತು ಟ್ರಸ್ಟಿ ಡಾ. ಅನಿಲ್ ಮಿಶ್ರಾ ತಮ್ಮ ಹುದ್ದೆಗಳಿಗೆ ರಾಜೀನಾಮೆ ನೀಡಿದ ನಂತರ, ಬ್ಯಾಂಕ್ ವಹಿವಾಟು ನಡೆಸಲು ಸಹಿದಾರರಿಲ್ಲದೆ ಬಿಕ್ಕಟ್ಟು ಸೃಷ್ಟಿಯಾಗಿತ್ತು. ಸುಮಾರು 1,000 ಸಿಬ್ಬಂದಿಯ ಜೂನ್ ತಿಂಗಳ ವೇತನ ಹಾಗೂ ಹೊರಗುತ್ತಿಗೆ ಸಂಸ್ಥೆಗಳ ಪಾವತಿ ವಿಳಂಬವಾಗಿತ್ತು. ಈ ಸಮಸ್ಯೆಗೆ ಪರಿಹಾರವಾಗಿ, ಮಧ್ಯಂತರ ಪ್ರಧಾನ ಕಾರ್ಯದರ್ಶಿ ಕೃಷ್ಣ ಮೋಹನ್ ಹಾಗೂ ಕಾರ್ಯದರ್ಶಿ ಜಗದೀಶ್ ಅಪ್ಲೆ ಅವರನ್ನು ಸಹಿದಾರರನ್ನಾಗಿ ಎಸ್‌ಬಿಐಗೆ ಟ್ರಸ್ಟ್ ಪ್ರಸ್ತಾವನೆ ಸಲ್ಲಿಸಿದ್ದು, ಸದ್ಯ ಹಣಕಾಸು ವಹಿವಾಟು ಸುಗಮಗೊಂಡಿದೆ.

ಸಿಇಒ ಹುದ್ದೆಗೆ 5,200 ಅರ್ಜಿಗಳು ಟ್ರಸ್ಟ್‌ನ ಸಿಇಒ ಹುದ್ದೆಗಾಗಿ ಬರೋಬ್ಬರಿ5,200 ಅರ್ಜಿಗಳು ಬಂದಿದ್ದು, ನಿವೃತ್ತ ನ್ಯಾಯಾಧೀಶ ಪ್ರಮೋದ್ ಕೊಹ್ಲಿ ನೇತೃತ್ವದ ಸಮಿತಿಯು ಇವುಗಳ ಪರಿಶೀಲನೆ ನಡೆಸುತ್ತಿದೆ. ಸಿಇಒ ಹಾಗೂ ಅಧಿಕೃತ ವಕ್ತಾರರ ನೇಮಕಾತಿಯನ್ನು ಸೆಪ್ಟೆಂಬರ್ 2 ರ ಸಭೆಯಲ್ಲಿ ಅಂತಿಮಗೊಳಿಸುವ ಸಾಧ್ಯತೆಯಿದೆ.

ಆಡಳಿತಾತ್ಮಕ ಸುಧಾರಣೆ: ರಾಮಮಂದಿರ ಉದ್ಘಾಟನೆಯ ನಂತರ ಲಕ್ಷಾಂತರ ಭಕ್ತರು ಆಗಮಿಸುತ್ತಿರುವುದರಿಂದ ಹಾಗೂ ದೇಣಿಗೆ ಕಳ್ಳತನದಂತಹ ಆಡಳಿತಾತ್ಮಕ ಲೋಪಗಳು ಬೆಳಕಿಗೆ ಬಂದ ಹಿನ್ನೆಲೆಯಲ್ಲಿ, ಟ್ರಸ್ಟ್ ತನ್ನ ನಿರ್ವಹಣಾ ವ್ಯವಸ್ಥೆಯನ್ನು ವೃತ್ತಿಪರಗೊಳಿಸಲು ಸಿಇಒ ಹಾಗೂ ಕಾರ್ಯದರ್ಶಿ ಹುದ್ದೆಗಳನ್ನು ಸೃಷ್ಟಿಸಿದೆ.

ಆಡಿಟಿಂಗ್ ಮತ್ತು ತಂತ್ರಜ್ಞಾನ ಆಧಾರಿತ ಕಾವಲು: ದೇಣಿಗೆ ಸಂಗ್ರಹದಲ್ಲಿ ಪಾರದರ್ಶಕತೆ ಕಾಯ್ದುಕೊಳ್ಳಲು ಕ್ಯೂಆರ್ ಕೋಡ್, ಡಿಜಿಟಲ್ ಸ್ವೀಕೃತಿ ಹಾಗೂ ಸಿಸಿಟಿವಿ ಕಣ್ಗಾವಲನ್ನು ಹೆಚ್ಚಿಸಲು ನೂತನ ಆಡಳಿತ ಮಂಡಳಿ ನಿರ್ಧರಿಸಿದೆ.

# ವಂದೇ ಮಾತರಂಗೆ ಅವಮಾನ ಮಾಡುವುದು ಕ್ರಿಮಿನಲ್ ಅಪರಾಧ;

ಅನ್ನು ಧ್ವನಿ ಮತದ ಮೂಲಕ ಅಂಗೀಕರಿಸಲಾಯಿತು. ನಿನ್ನೆ ಬೆಳಗ್ಗೆ ಎರಡು ಬಾರಿ ಕಲಾಪ ಮುಂದೂಡಲ್ಪಟ್ಟ ನಂತರ, ಮಧ್ಯಾಹ್ನದ ಭೋಜನದ ಬಳಿಕ ಸದನ ಸಮಾವೇಶಗೊಳ್ಳುತ್ತಿದ್ದಂತೆ ಉಪಸಭಾಪತಿ ಹರಿವಂಶ್ ಅವರು ಪ್ರತಿಭಟನೆ ನಡೆಸುತ್ತಿದ್ದ ಸದಸ್ಯರಿಗೆ ಕಲಾಪದ ಘನತೆಯನ್ನು ಕಾಯ್ದುಕೊಳ್ಳುವಂತೆ ಮನವಿ ಮಾಡಿದರು.

ಪರಿಶೀಲನೆ ಮತ್ತು ಅಂಗೀಕಾರಕ್ಕಾಗಿ ಪಟ್ಟಿಯಾಗಿದ್ದ ಈ ವಿಧೇಯಕದ ಮೇಲಿನ ಚರ್ಚೆಯನ್ನು ಪೀಠವು ಕೈಗೆತ್ತಿಕೊಳ್ಳುತ್ತಿದ್ದಂತೆ, ವಿರೋಧ ಪಕ್ಷಗಳು ತಮ್ಮ ಪ್ರತಿಭಟನೆಯನ್ನು ಮುಂದುವರಿಸಿದವು ಮತ್ತು ಘೋಷಣೆಗಳನ್ನು ಕೂಗಿದವು. ನೀಟ್ ಪ್ರಶ್ನೆ ಪತ್ರಿಕೆ ಸೋರಿಕೆ ಖಂಡಿಸಿ ರಾಜಧಾನಿಯಲ್ಲಿ ಪ್ರತಿಭಟನೆ ನಡೆಸಿದವರ ಮೇಲಿನ ಪೊಲೀಸ್ ಕ್ರಮಕ್ಕೆ ಸಂಬಂಧಿಸಿದಂತೆ ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರು ಪ್ರತಿಕ್ರಿಯಿಸಬೇಕು ಎಂದು ಅವರು ಆಗ್ರಹಿಸಿದರು. ವಿಪಕ್ಷಗಳ ಪ್ರತಿಭಟನೆಯ ನಡುವೆಯೂ ಉಪಸಭಾಪತಿ ಸದನದ ಕಲಾಪವನ್ನು ಮುಂದುವರಿಸಿದರು. ಚರ್ಚೆಯಲ್ಲಿ ಭಾಗವಹಿಸುವಂತೆ ರಾಜ್ಯಸಭಾ ಸದಸ್ಯರಲ್ಲಿ ವಿನಂತಿಸಿದರು. ಆದರೂ ವಿರೋಧ ಪಕ್ಷಗಳು ತಮ್ಮ ಬೇಡಿಕೆಯನ್ನು ಮುಂದುವರಿಸಿದವು. ನಂತರ ಕೇಂದ್ರ ಸಾಮಾಜಿಕ ನ್ಯಾಯ ಮತ್ತು ಸಬಲೀಕರಣ ರಾಜ್ಯ ಸಚಿವ ರಾಮದಾಸ್ ಅಥಾವಳೆ ಅವರು ಪ್ರಸ್ತಾವಿತ ಮಸೂದೆಯ ಕುರಿತು ಮಾತನಾಡುತ್ತಿದ್ದಾಗ ವಿಪಕ್ಷಗಳ ಸಂಸದರು ಕಲಾಪದಿಂದ ಹೊರನಡೆದರು.

ವಿಧೇಯಕದ ಮೇಲಿನ ಚರ್ಚೆಗೆ ಉತ್ತರಿಸಿದ ಕೇಂದ್ರ ಗೃಹ ರಾಜ್ಯ ಸಚಿವ ನಿತ್ಯಾನಂದ ರೈ, ಕಾಂಗ್ರೆಸ್ ಪಕ್ಷವು ತುಷ್ಟೀಕರಣ ರಾಜಕಾರಣಕ್ಕೆ ಮೊರೆಹೋಗುವ ಮೂಲಕ ದೇಶದ ಗೌರವವಾದ ‘ವಂದೇ ಮಾತರಂ’ ರಾಷ್ಟ್ರಗೀತೆಯನ್ನು ಅವಮಾನಿಸಲು ಯತ್ನಿಸುತ್ತಿದೆ ಎಂದು ವಾಗ್ದಾಳಿ ನಡೆಸಿದರು. ದೇಶಕ್ಕಾಗಿ ಪ್ರಾಣ-ತ್ಯಾಗ ಮಾಡುವಾಗ ಹಲವು ಸ್ವಾತಂತ್ರ್ಯ ಹೋರಾಟಗಾರರು ತಮ್ಮ ಕೊನೆಯ ನುಡಿಯಾಗಿ ‘ವಂದೇ ಮಾತರಂ’ ಎಂದು ಹೇಳಿದ್ದ ಹಲವು ನಿದರ್ಶನಗಳನ್ನು ಅವರು ಸ್ಮರಿಸಿದರು.

## ಮೊದಲಿನಂತೆಯೇ ಜಾತಿ ಪ್ರಮಾಣ ಪತ್ರ ನೀಡುವಂತೆ
# ಕರ್ನಾಟಕ ಭೀಮ್ ಸೇನೆ ಮನವಿ



ಹುಣಸೂರು: ಕರ್ನಾಟಕ ಭೀಮ್ ಸೇನೆ (ರಿ ) ಹುಣಸೂರು ತಾಲ್ಲೂಕು ಘಟಕದ ವತಿಯಿಂದ ಉಪವಿಭಾಗಾಧಿಕಾರಿಗಳು ಹುಣಸೂರು ಉಪವಿಭಾಗ ಹಾಗೂ ಪೌರಾಯುಕ್ತರು ಹುಣಸೂರು ನಗರಸಭೆ ಇವರಿಗೆ ತಾಲೂಕಿನ ಸಾರ್ವಜನಕರು ಎದುರಿಸುತ್ತಿರುವ ಜ್ವಲಂತ ಸಮಸ್ಯೆಗಳನ್ನು ಪರಿಹರಿಸಿಕೊಡುವಂತೆ ಹಾಗೂ ಕೆಲವು ಬೇಡಿಕೆಗಳನ್ನು ಈಡೇರಿಸಿಕೊಡುವಂತೆ ಮನವಿ ಸಲ್ಲಿಸಲಾಯಿತು.

ಪರಿಶಿಷ್ಟಜಾತಿ ಪ್ರಮಾಣ ಪತ್ರವನ್ನು ತೆಗೆದುಕೊಳ್ಳಲು ಲಾಯರ್ ಆಫಿಡೇವಿಟ್ ಕೇಳುತ್ತಿರುವುದರಿಂದ ಈ ಆಫಿಡೇವಿಟ್ ಪ್ರಮಾಣ ಪತ್ರವನ್ನು ತೆಗೆದುಕೊಳ್ಳಲು ಸುಮಾರು 300 ರಿಂದ 500 ರೂಪಾಯಿ ವರೆಗೆ ವೆಚ್ಚ ತಗಲುತ್ತಿದ್ದು ಇದರಿಂದ ಬಡವರು ಮತ್ತು ಅಸಹಾಯಕರಿಗೆ ಇದು ಹೊರೆಯಾಗುತ್ತಿದೆ ಆದ್ದರಿಂದ ಇದನ್ನು ತೆಗೆದುಹಾಕಿ ಮೊದಲಿನಂತೆಯೇ ಜಾತಿ ಪ್ರಮಾಣ ಪತ್ರವನ್ನು ನೀಡಬೇಕು.

ಸುಮಾರು 5 ತಿಂಗಳುಗಳಿಂದ ದಾಖಲಾತಿ ಪರಿಶೀಲನೆ ನೆಪಹೇಳಿ ವೃದ್ಧಾಪ್ಯವೇತನ, ವಿಧವಾವೇತನ ಹಾಗೂ ಅಂಗವಿಕಲ ವೇತನವನ್ನು ತಡೆಹಿಡಿದಿದ್ದು ಇದ-ರಿಂದ ವಯೋವೃದ್ಧರಿಗೆ ಸಮಸ್ಯೆಯಾಗಿದ್ದು ಆದಕಾರಣ ಇದನ್ನು ಬೇಗ ಪರಿಹರಿಸಿ ಸಾಕಾಲಕ್ಕೆ ಮಂಜೂರು ಮಾಡಿಕೊಡುವಂತೆ ಮನವಿ ಮಾಡಲಾಯಿತು.

ಹುಣಸೂರು ಪಟ್ಟಣದ ಹೃದಯ ಭಾಗದಲ್ಲಿ ಡಾ. ಬಿ ಆರ್ ಅಂಬೇಡ್ಕರ್ ರವರ ಬೃಹತ್ ಪ್ರತಿಮೆ ಯನ್ನು ನಿರ್ಮಿಸುವಂತೆ ಒತ್ತಾಯಿಸಿ ಮನವಿ ನೀಡಲಾಯಿತು. ಸಂತೋಷ ಮೈಸೂರು ಜಿಲ್ಲಾಧ್ಯಕ್ಷರು, ಅಶೋಕ್ ಜಿಲ್ಲಾ ಉಪಾಧ್ಯಕ್ಷರು ಕುಮಾರ್ ಕೆ ಉಪಸ್ಥಿತಿಇದ್ದರು

## ಮಹಿಳಾ ಸುರಕ್ಷತೆ, ಪ್ರಗತಿ ಪರಿಶೀಲನೆಗೆ ಇಂದು ಗದಗಕ್ಕೆ ಆಯೋಗದ ಅಧ್ಯಕ್ಷೆ ಡಾ. ನಾಗಲಕ್ಷ್ಮೀ ಚೌಧರಿ ಭೇಟಿ

ಗದಗ : ಕರ್ನಾಟಕ ರಾಜ್ಯ ಮಹಿಳಾ ಆಯೋಗದ ಅಧ್ಯಕ್ಷರಾದ ಡಾ. ನಾಗಲಕ್ಷ್ಮೀ ಚೌಧರಿ ಅವರು ಇಂದಿನಿಂದ ಅಗಸ್ಟ್ 1 ರವರೆಗೆ ಗದಗ ಜಿಲ್ಲೆಯಲ್ಲಿ ಮೂರು ದಿನಗಳ ಸುದೀರ್ಘ ಅಧಿಕೃತ ಪ್ರವಾಸ ಕೈಗೊಳ್ಳಲಿದ್ದಾರೆ. ಮಹಿಳಾ ಭದ್ರತೆ, ಕಔಖಊ ಕಾಯ್ದೆಯ ಅರಿವು ಹಾಗೂ ಜಿಲ್ಲೆಯಲ್ಲಿ ಮಹಿಳಾ ಪ್ರಗತಿ ಪರಿಶೀಲನೆಗೆ ಸಂಬಂಧಿಸಿದಂತೆ ಹಲವು ಮಹತ್ವದ ಕಾರ್ಯಕ್ರಮಗಳಲ್ಲಿ ಅವರು ಭಾಗವಹಿಸಲಿದ್ದಾರೆ.

ಅಧ್ಯಕ್ಷರು ಜುಲೈ 30 ರಂದು ಸಂಜೆ 6 ಗಂಟೆ-ಗೆ ಬಾಗಲಕೋಟೆಯಿಂದ ಹೊರಟು ರಾತ್ರಿ 8:30ಕ್ಕೆ ಗದಗ ತಲುಪಿ ವಾಸ್ತವ್ಯ ಹೂಡಲಿದ್ದಾರೆ. ಜುಲೈ 31 ರಂದು ಬೆಳಿಗ್ಗೆ 9:15ಕ್ಕೆ ಕೆ.ಎಚ್.ಪಾಟೀಲ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಗೆ ಭೇಟಿ ನೀಡಲಿದ್ದು, ಬಳಿಕ 10:15ಕ್ಕೆ ನವನಗರದಲ್ಲಿರುವ ಮಹಿಳಾ ಪೊಲೀಸ್ ಠಾಣೆಗೆ ಭೇಟಿ ನೀಡಲಿದ್ದಾರೆ. ನಂತರ ಬೆಳಿಗ್ಗೆ 11 ಗಂಟೆಗೆ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಆಯೋಜಿಸಿರುವ 'ಕಔಖಊ ಅಧಿನಿಯಮ 2013' ತರಬೇತಿ ಕಾರ್ಯಾಗಾರ ಹಾಗೂ ಅರಿವು ಕಾರ್ಯಕ್ರಮವನ್ನು ಉದ್ಘಾಟಿಸಲಿದ್ದಾರೆ.



ಅಲ್ಲಿಂದ ರೋಣಕ್ಕೆ ಆಗಮಿಸಿ, ರಾಜೀವ ಗಾಂಧಿ ಶಿಕ್ಷಣ ಸಂಸ್ಥೆಯ ಆವರಣದಲ್ಲಿ ಆಯೋಜಿಸಿರುವ ಪೂಜ್ಯ ಮಾತೋಶ್ರೀ ಬಸಮ್ಮನವರು ಸಂಗನಗೌಡರು ಪಾಟೀಲ ಅವರ 72ನೇ ಪುಣ್ಯಸ್ಮರಣೋತ್ಸವದ ಮಹಿಳಾ ಗೋಷ್ಠಿಯನ್ನು ಉದ್ಘಾಟಿಸಲಿದ್ದಾರೆ. ಮಧ್ಯಾಹ್ನ 3 ಗಂಟೆಗೆ ರೋಣ ತಾಲೂಕು ಸರ್ಕಾರಿ ಆಸ್ಪತ್ರೆಗೆ ಭೇಟಿ ನೀಡಲಿದ್ದು, ಸಂಜೆ 4:45ಕ್ಕೆ ಗದಗ ರಾಜೀವ ಗಾಂಧಿ ನಗರದ ಸುಡುಗಾಡು ಸಿದ್ಧ ಸಮುದಾಯದ ಮೂಲಭೂತ ಸೌಲಭ್ಯಗಳ ಪರಿಶೀಲನೆ ನಡೆಸಲಿದ್ದಾರೆ.

ಅಗಸ್ಟ್ 1 ರಂದು ಬೆಳಿಗ್ಗೆ 9 ಗಂಟೆಗೆ ಜಿಲ್ಲಾ ಆಡಳಿತ ಭವನದಲ್ಲಿ ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ಮಹಿಳಾ ಸಂಘ ಉದ್ಘಾಟಿಸಲಿದ್ದು, ವಿವಿಧ ಕಾಲೇಜು ವಿದ್ಯಾರ್ಥಿನಿಯರೊಂದಿಗೆ ಸಂವಾದ ನಡೆಸಲಿದ್ದಾರೆ. ನಂತರ ಬೆಳಿಗ್ಗೆ 11 ಗಂಟೆ-ಗೆ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಮಹಿಳಾ ಪ್ರಗತಿ ಪರಿಶೀಲನಾ ಸಭೆ ನಡೆಸಲಿದ್ದಾರೆ.

ಈ ಸಭೆಯಲ್ಲಿ SHW ಕಾಯ್ದೆ ಜಾರಿ, ದಾಖಲಾದ ಪ್ರಕರಣಗಳ ಅಂಕಿ ಅಂಶಗಳ ಚರ್ಚೆ, ಸರ್ಕಾರಿ ಮತ್ತು ಖಾಸಗಿ ಸಂಸ್ಥೆಗಳಲ್ಲಿ ಆಂತರಿಕ ದೂರು ಸಮಿತಿಗಳ ಪರಿಶೀಲನೆ, ಮಹಿಳಾ ದೌರ್ಜನ್ಯ ತಡೆ ಹಾಗೂ ವಿದ್ಯಾರ್ಥಿನಿಯರ ಮತ್ತು ಮಹಿಳೆಯರ ಸುರಕ್ಷತೆಗೆ ಜಿಲ್ಲಾಡಳಿತ ಕೈಗೊಂಡ ಕ್ರಮಗಳ ಬಗ್ಗೆ ಸಮಗ್ರ ಪರಿಶೀಲನೆ ನಡೆಸಲಿದ್ದಾರೆ ಎಂದು ರಾಜ್ಯ ಮಹಿಳಾ ಆಯೋಗದ ಪ್ರಕಟಣೆ ತಿಳಿಸಿದೆ.

## 'ಇನ್ನು ಮೌನ ಬೇಡ, ಹೋರಾಟವೇ ಉತ್ತರ'
## ಚಿಕ್ಕನಾಯಕನಹಳ್ಳಿ ಹೇಮಾವತಿ ಕಾಮಗಾರಿ ವಿಳಂಬ : ರೈತರ ಘರ್ಜನೆ-ಮಠಾಧೀಶರುಗಳ,ವಿವಿಧ ಸಂಘಟನೆಗಳ ಬೆಂಬಲ



ಚಿಕ್ಕನಾಯಕನಹಳ್ಳಿ, ಹೇಮಾವತಿ ಕಾರಣ ಕಾಮಗಾರಿ ವಿಳಂಬ ವಿಚಾರಕ್ಕೆ ಸರ್ಕಾರ ಹಾಗೂ ಅಧಿಕಾರಿಗಳ ನಿರ್ಲಕ್ಷ್ಯಕ್ಕೆ ಆಕ್ರೋಶಗೊಂಡಿರುವ ರೈತರು ಜುಲೈ 30 ಇಂದಿನಿಂದ ತಾಲೂಕು ಕಚೇರಿ ಮುಂಭಾಗ ಅನಿರ್ದಿಷ್ಟಾವಧಿ ಸತ್ಯಾಗ್ರಹ ಮತ್ತು ಧರಣಿ ನಡೆಸಲು ಸಜ್ಜಾಗಿದ್ದಾರೆ.

ತಮಡಿಹಳ್ಳಿ ಶ್ರೀಗಳು ಹಾಗೂ ಗೋಡೇಕೆರೆ ಶ್ರೀಗಳ ಬೆಂಬಲ ಹಾಗೂ ಚಿಕ್ಕನಾಯಕನಹಳ್ಳಿ ತಾಲೂಕಿನ ಹಲವು ಸಂಘಟನೆಗಳು ಬೆಂಬಲ ಸೂಚಿಸಿದ್ದಾರೆ

ರೈತ ಮುಖಂಡರು ಮಾತನಾಡಿ, ಶಾಸಕ ಸಿಬಿ ಸುರೇಶ್ ಬಾಬು ಡಿಸಿ, ಎಸಿ ಹಾಗೂ ತಹಶೀಲ್ದಾರ್ ಸೂಚನೆಗಳಿಗೂ ಗುತ್ತಿಗೆದಾರರು ಬೆಲೆ ನೀಡುತ್ತಿಲ್ಲ. ರೈತರ ಸಹನೆಯನ್ನು ಪರೀಕ್ಷಿಸುವ ಕೆಲಸ ನಡೆಯುತ್ತಿದೆ. ಇನ್ನು ನ್ಯಾಯ ಸಿಗುವವರೆಗೂ ಹೋರಾಟ ನಿಲ್ಲುವುದಿಲ್ಲ ಎಂದು ಎಚ್ಚರಿಕೆ ನೀಡಿದರು. ತಮಡಿಹಳ್ಳಿ ಶ್ರೀಗಳು ಮತ್ತು ಗೋಡೇಕೆರೆ ಶ್ರೀಗಳು ರೈತರ ನ್ಯಾಯಯುತ ಹೋರಾಟಕ್ಕೆ ಸಂಪೂರ್ಣ ಬೆಂಬಲ ಘೋಷಿಸಿದ್ದು, ಸಾವಿರಾರು ರೈತರು ಸತ್ಯಾಗ್ರಹದಲ್ಲಿ ಭಾಗವಹಿಸಿ ಶಾಂತಿಯುತವಾಗಿ ಹೋರಾಟವನ್ನು ಯಶಸ್ವಿಗೊಳಿಸುವಂತೆ ಕರೆ ನೀಡಿದರು. ಇದರೊಂದಿಗೆ ತಾಲೂಕಿನ ಹಲವು ರೈತಪರ, ಸಾಮಾಜಿಕ ಹಾಗೂ ವಿವಿಧ ಸಂಘಟನೆಗಳು ಕೂಡ ಹೋರಾಟಕ್ಕೆ ಬಹಿರಂಗ ಬೆಂಬಲ ವ್ಯಕ್ತಪಡಿಸಿದ್ದು, ಜುಲೈ 30ರಿಂದ ನಡೆಯಲಿರುವ ಸತ್ಯಾಗ್ರಹವನ್ನು ಐತಿಹಾಸಿಕ ಹೋರಾಟವನ್ನಾಗಿ ರೂಪಿಸಲು ಸಜ್ಜಾಗಿವೆ.

"ಹೇಮಾವತಿ ನೀರು ಸಿಗುವವರೆಗೆ ಹೋರಾಟ ನಿಲ್ಲದು" ಎಂಬ ಘೋಷಣೆಯೊಂದಿಗೆ ರೈತರು ತಮ್ಮ ಹೋರಾಟವನ್ನು ಮತ್ತಷ್ಟು ತೀವ್ರಗೊಳಿಸಲು ನಿರ್ಧರಿಸಿದ್ದಾರೆ.

## ಯಾದಗಿರಿ ನಗರಸಭೆ ನಿರ್ಲಕ್ಷ್ಯಕ್ಕೆ ಸ್ಥಳೀಯರ ಆಕ್ರೋಶ




ಯಾದಗಿರಿ: ನಗರದ ವಾರ್ಡ್ ನಂ. 6ರಲ್ಲಿ ಸಾರ್ವಜನಿಕ ಶೌಚಾಲಯದ ಮುಂಭಾಗದ ರಸ್ತೆಯಲ್ಲಿ ಕಸ, ರಾಡಿ ಹಾಗೂ ತ್ಯಾಜ್ಯ ವಸ್ತುಗಳು ದೀರ್ಘಕಾಲದಿಂದ ತೆರವುಗೊಳ್ಳದೆ ಬಿದ್ದಿರುವುದರಿಂದ ಸ್ಥಳೀಯ ನಿವಾಸಿಗಳು ತೀವ್ರ ಸಂಕಷ್ಟ ಅನುಭವಿಸುತ್ತಿದ್ದಾರೆ. ರಸ್ತೆ ಸಂಪೂರ್ಣ ಕಸದ ರಾಶಿಯಿಂದ ಆವರಿಸಿಕೊಂಡಿದ್ದು, ಜನರು ಇದೇ ಮಾರ್ಗದಲ್ಲಿ ಸಂಚರಿಸಬೇಕಾದ ಅನಿವಾರ್ಯ ಪರಿಸ್ಥಿತಿ ನಿರ್ಮಾಣವಾಗಿದೆ.

ಸ್ಥಳೀಯರ ಆರೋಪದಂತೆ, ಹಲವು ವರ್ಷಗಳಿಂದ ಈ ಪ್ರದೇಶದ ಸ್ವಚ್ಛತೆಗೆ ನಗರಸಭೆ ಸಮರ್ಪಕ ಗಮನ ಹರಿಸಿಲ್ಲ. ಕಸದ ರಾಶಿಯಿಂದ ದುರ್ವಾಸನೆ ಹರಡುತ್ತಿದ್ದು, ಸೊಳ್ಳೆ ಹಾಗೂ ಇತರೆ ಕೀಟಗಳ ಕಾಟ ಹೆಚ್ಚಾಗಿದೆ. ಇದರಿಂದ ಸಾರ್ವಜನಿಕರ ಆರೋಗ್ಯಕ್ಕೂ ಅಪಾಯ ಎದುರಾಗುವ ಸಾಧ್ಯತೆ ಇದೆ ಎಂದು ನಿವಾಸಿಗಳು ಆತಂಕ ವ್ಯಕ್ತಪಡಿಸಿದ್ದಾರೆ.

ನಗರಸಭೆಯಲ್ಲಿ ಸ್ವಚ್ಛತಾ ವ್ಯವಸ್ಥೆ ಮೇಲ್ವಿಚಾರಣೆಗೆ ಸ್ಯಾನಿಟರಿ ಇನ್ಸ್‌ಪೆಕ್ಟರ್ ನೇಮಕಗೊಂಡಿದ್ದರೂ, ಅವರು ಈ ಭಾಗ-ಕ್ಕೆ ಇದುವರೆಗೆ ಭೇಟಿ ನೀಡಿ ಸಮಸ್ಯೆ ಪರಿಶೀಲಿಸಿಲ್ಲ ಎಂದು ಸ್ಥಳೀಯರು ದೂರಿದ್ದಾರೆ. "ನಗರಸಭೆಯ ಅಧಿಕಾರಿಗಳು ನಮ್ಮ ವಾರ್ಡ್ ಕಡೆ ಗಮನ ಹರಿಸುತ್ತಿಲ್ಲ. ಸಮಸ್ಯೆ ಬಗ್ಗೆ ಹಲವು ಬಾರಿ ಗಮನ ಸೆಳೆದರೂ ಯಾವುದೇ ಕ್ರಮ ಕೈಗೊಳ್ಳಲಾಗಿಲ್ಲ" ಎಂದು ನಿವಾಸಿಗಳು ಅಸಮಾಧಾನ ವ್ಯಕ್ತಪಡಿಸಿದ್ದಾರೆ.

ಕೂಡಲೇ ಕಸದ ರಾಶಿಯನ್ನು ತೆರವುಗೊಳಿಸಿ, ವಾರ್ಡ್‌ನಲ್ಲಿ ನಿಯಮಿತ ಸ್ವಚ್ಛತಾ ಕಾರ್ಯ ಕೈಗೊಳ್ಳಬೇಕು. ಸಾರ್ವಜನಿಕ ಶೌಚಾಲಯದ ಸುತ್ತಮುತ್ತಲಿನ ಪ್ರದೇಶವನ್ನು ಸ್ವಚ್ಛವಾಗಿಟ್ಟುಕೊಂಡು ಆರೋಗ್ಯಕರ ವಾತಾವರಣ ನಿರ್ಮಿಸಬೇಕು ಎಂದು ಸ್ಥಳೀಯರು ನಗರಸಭೆ ಅಧಿಕಾರಿಗಳಿಗೆ ಒತ್ತಾಯಿಸಿದ್ದಾರೆ.

## ಸರ್ಕಾರದ ಟ್ರಾನ್ಸ್‌ಫಾರ್ಮರ್ ಖಾಸಗಿ ಬಳಕೆಗೆ?
# ಸಾಸಲಿನಲ್ಲಿ ಅಕ್ರಮ ಬಯಲು!

ಚಿಕ್ಕನಾಯಕನಹಳ್ಳಿ, ತಾಲೂಕಿನ ಸಾಸಲು ಗ್ರಾಮದಲ್ಲಿ ಸಾರ್ವಜನಿಕ ಕುಡಿಯುವ ನೀರು ಹಾಗೂ ಶ್ರೀ ಆಂಜನೇಯ ಸ್ವಾಮಿ ದೇವಸ್ಥಾನದ ಬಳಕೆಗಾಗಿ ಸರ್ಕಾರದಿಂದ ಮಂಜೂರಾಗಿರುವ ವಿದ್ಯುತ್ ಪರಿವರ್ತಕ (ಟ್ರಾನ್ಸ್‌ಫಾರ್ಮರ್) ದುರುಪಯೋಗವಾಗುತ್ತಿದೆ ಎಂಬ ಗಂಭೀರ ಆರೋಪ ಕೇಳಿಬಂದಿದ್ದು, ಈ ಸಂಬಂಧ ಗ್ರಾಮದ ನಿವಾಸಿ ಬೈರೇಶ್ ಬಿನ್ ಈಶ್ವರಾಚಾರ್ ಅವರು ಕೆಇಬಿ ಪ್ರಮುಖ ಅಭಿಯಂತರರ ಕಚೇರಿಗೆ ಅಧಿಕೃತ ದೂರು ಸಲ್ಲಿಸಿದ್ದಾರೆ. ದೂರಿನ ಪ್ರಕಾರ, ಪೆಮ್ಮನದೇವರಹಳ್ಳಿ ವ್ಯಾಪ್ತಿಯಲ್ಲಿರುವ ತಮ್ಮ ಜಮೀನಿನಲ್ಲಿ ಕಳೆದ ನಾಲ್ಕು ವರ್ಷಗಳಿಂದ ಅಧಿಕೃತ ಟ್ರಾನ್ಸ್‌ಫಾರ್ಮರ್ ಮೂಲಕ ಪಂಪ್‌ಸೆಟ್‌ಗೆ ವಿದ್ಯುತ್ ಪಡೆದು ಕೃಷಿ ಮಾಡುತ್ತಿದ್ದು, ಇದೇ ವೇಳೆ ಗ್ರಾಮದ ಬಿ.ಎಸ್. ಸುರೇಶ್ ಬಿನ್ ಶಂಕರಲಿಂಗಪ್ಪ ಅವರು ತಮ್ಮ ಪಂಪ್‌ಸೆಟ್‌ಗೆ ಸಂಪರ್ಕ ಕಲ್ಪಿಸಿರುವ ಮುಖ್ಯ ವಿದ್ಯುತ್ ತಂತಿಯನ್ನು ಪದೇಪದೇ ಕತ್ತರಿಸಿ ತೊಂದರೆ ನೀಡುತ್ತಿದ್ದಾರೆ ಎಂದು ಆರೋಪಿಸಲಾಗಿದೆ. ಇದೇ ವೇಳೆ, ಸಾರ್ವಜನಿಕ ಕುಡಿಯುವ ನೀರು ಹಾಗೂ ಶ್ರೀ ಆಂಜನೇಯ ಸ್ವಾಮಿ ದೇವಸ್ಥಾನದ ಬಳಕೆಗಾಗಿ ಮಂಜೂರಾಗಿದ್ದ ಟ್ರಾನ್ಸ್‌ಫಾರ್ಮರ್‌ನಿಂದ ಅಕ್ರಮವಾಗಿ ಖಾಸಗಿ ವಿದ್ಯುತ್ ಸಂಪರ್ಕಗಳನ್ನು ನೀಡಲಾಗಿದೆ ಎಂದು ದೂರಿನಲ್ಲಿ ಉಲ್ಲೇಖಿಸಲಾಗಿದೆ. ಮೂವರಿಗೆ ತಲಾ 20,000 ಪಡೆದು ಅಕ್ರಮವಾಗಿ ವಿದ್ಯುತ್ ಸಂಪರ್ಕ ಮಾರಾಟ ಮಾಡಲಾಗಿದೆ ಎಂಬ ಆರೋಪವೂ ಕೇಳಿಬಂದಿದೆ.

ಗ್ರಾಮದ ಸಮೀಪದಲ್ಲೇ ಇತರೆ ಟ್ರಾನ್ಸ್‌ಫಾರ್ಮರ್‌ಗಳಿದ್ದರೂ, ಅಧಿಕಾರಿಗಳು ಲಂಚ ಪಡೆದು ಕುಡಿಯುವ ನೀರಿನ ಟ್ರಾನ್ಸ್‌ಫಾರ್ಮರ್‌ನಿಂದಲೇ ಅಕ್ರಮ ಸಂಪರ್ಕ ಕಲ್ಪಿಸುತ್ತಿದ್ದಾರೆ ಎಂದು ದೂರಿನಲ್ಲಿ ಆರೋಪಿಸಲಾಗಿದೆ.

ಈ ಕುರಿತು ಸ್ಥಳೀಯ ಕೆಇಬಿ ಅಧಿಕಾರಿಗಳಿಗೆ



ಮೌಖಿಕವಾಗಿ ಹಲವು ಬಾರಿ ಮಾಹಿತಿ ನೀಡಿ-ದ್ದರೂ ಯಾವುದೇ ಕ್ರಮ ಕೈಗೊಂಡಿಲ್ಲ ಎಂದು ರೈತ ಅಸಮಾಧಾನ ವ್ಯಕ್ತಪಡಿಸಿದ್ದಾರೆ.

ಈ ಹಿನ್ನೆಲೆಯಲ್ಲಿ ಸಂಬಂಧಪಟ್ಟ ಹಿರಿಯ ಅಧಿಕಾರಿಗಳು ಕೂಡಲೇ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಬೇಕು. ಅಕ್ರಮ ವಿದ್ಯುತ್ ಸಂಪರ್ಕಗಳ ವಿರುದ್ಧ ಕಾನೂನು ಕ್ರಮ ಕೈಗೊಂಡು, ತಮ್ಮ ಪಂಪ್‌ಸೆಟ್‌ಗೆ ಸಮರ್ಪಕ ವಿದ್ಯುತ್ ಪೂರೈಕೆ ಕಲ್ಪಿಸಬೇಕು ಎಂದು ಬೈರೇಶ್ ಅವರು ಆಗ್ರಹಿಸಿದ್ದಾರೆ.

ಈ ಆರೋಪಗಳಿಗೆ ಸಂಬಂಧಿಸಿದ ಅಧಿಕಾರಿಗಳು ಹಾಗೂ ಆರೋಪಿತರ ಪ್ರತಿಕ್ರಿಯೆ ಇನ್ನಷ್ಟೇ ಲಭ್ಯವಾಗಬೇಕಿದೆ.

ಅನಂತ ಜನಶಕ್ತಿ ಪತ್ರಿಕೆಗೆ ಜಿಲ್ಲಾ ಹಾಗೂ ತಾಲೂಕು ವರದಿಗಾರರು ಬೇಕಾಗಿದ್ದಾರೆ..

# 2 ಕೋಟಿ ರೂ.ವೆಚ್ಚದ ಬೃಹತ್ ಕಾಮಗಾರಿಗಳಿಗೆ ಚಾಲನೆ ಆರೋಗ್ಯ, ಶಿಕ್ಷಣ ಕ್ಷೇತ್ರಗಳ ಅಭಿವೃದ್ಧಿ ನನ್ನ ಗುರಿ : ಶಾಸಕ ಶರಣಗೌಡ ಕಂದಕೂರ

ಯಾದಗಿರಿ: ಮತಕ್ಷೇತ್ರದಲ್ಲಿ ಶುದ್ಧ ಕುಡಿಯುವ ನೀರು, ಆರೋಗ್ಯ ಹಾಗೂ ಶಿಕ್ಷಣದ ಬಗ್ಗೆ ಹೆಚ್ಚು ಒತ್ತು ಕೆಲಸ ನಾನು ಆಯ್ಕೆಯಾದಾಗಿನಿಂದ ಹೇಳುತ್ತಿದ್ದು, ಅದನ್ನೇ ಪಾಲಿಸುತ್ತಿದ್ದೇನೆ ಎಂದು ಗುರಮಠಕಲ್ ಶಾಸಕ ಶರಣಗೌಡ ಕಂದಕೂರ ತಿಳಿಸಿದರು.

ಬುಧವಾರ ಸೈದಾಪುರ ಗ್ರಾಮದಲ್ಲಿ ಕೆಕೆಆರ್ ಡಿಬಿ ಯೋಜನೆಯಡಿ ಸುಮಾರು 2 ಕೋಟಿ ರೂ. ವೆಚ್ಚದಲ್ಲಿ ಸರ್ಕಾರಿ ಮೆಟ್ರಿಕ್ ಪೂರ್ವ ಬಾಲಕಿಯರ ವಸತಿ ನಿಲಯದ ನೂತನ ನಾಲ್ಕು ಕೋಣೆಗಳ ಉದ್ಘಾಟನೆ, ರಾಚನಳ್ಳಿ ಗ್ರಾಮದ ಕಿತ್ತೂರು ರಾಣಿ ಚೆನ್ನಮ್ಮ ವಸತಿ ಶಾಲೆಗೆ ಸಂಪರ್ಕಿಸುವ ನೂತನ ರಸ್ತೆ ಉದ್ಘಾಟನೆ, ಕಂಪ್ಯೂಟರ್ ಲ್ಯಾಬ್ ಹಾಗೂ ಶುದ್ಧ ಕುಡಿಯುವ ನೀರಿನ ಘಟಕ ಲೋಕಾರ್ಪಣೆಗೊಳಿಸಿ ಮಾತನಾಡಿದರು.

ಅಧಿಕಾರಿಗಳಿಗೆ ನಾನು ಸಿಟ್ಟಿನಿಂದ ಯಾಕೆ ಮಾತನಾಡುತ್ತೇನೆ ಎಂದು ಈಗೀಗ ನಿಮಗೆಲ್ಲ ಈಗ ಅರ್ಥವಾಗಿದೆ. ನಾನು ನನ್ನ ವೈಯಕ್ತಿಕ ಕಾರಣಕ್ಕಾಗಿ ಯಾವ ಅಧಿಕಾರಿಗಳಿಗೆ ಫೋನ್ ಮಾಡುವುದಿಲ್ಲ. ಆದರೆ, ನನ್ನ ಅಭಿವೃದ್ಧಿಯ ವೇಗಕ್ಕೆ ಯಾರೂ ಸ್ಪಂದನೆ ಮಾಡುವುದಿಲ್ಲ ಅಂಥವರಿಗೆ ಚಳಿ ಬಿಡಿಸಿದ್ದೇನೆ ಎಂದು ಹೇಳಿದರು.

ಕ್ಷೇತ್ರದಲ್ಲಿ ವಸತಿ ಶಾಲೆಗಳಿಗೆ ಮೂಲಸೌಕರ್ಯ ಕಲ್ಪಿಸಲು ನಾನು ಬದ್ಧನಾಗಿದ್ದೇನೆ. ನಾನು ಅನುದಾನ ನೀಡಬಹುದು, ಅದನ್ನು ಅನುಷ್ಠಾನಕ್ಕೆ ತರುವ ಕೆಲಸ ಅಧಿಕಾರಿಗಳಿಂದ ಆಗಬೇಕು ಎಂದರು. ಸಹಾಯಕ ಆಯುಕ್ತ ಶ್ರೀಧರ ಗೋಟೂರ ಮಾತನಾಡಿ, ಈ ಕಾಲಘಟ್ಟದಲ್ಲಿ ವಸತಿ ಶಾಲೆಗಳಲ್ಲಿ ಅಭ್ಯಾಸ ಮಾಡುತ್ತಿರುವ ವಿದ್ಯಾರ್ಥಿಗಳು ಅದೃಷ್ಟವಂತರು.

ಕಾರಣ ಈ ಭಾಗದ ಶಾಸಕ ಶರಣಗೌಡ ಕಂದಕೂರ ಅವರು, ಶಿಕ್ಷಣ ಹಾಗೂ ಆರೋಗ್ಯ ಕ್ಷೇತ್ರಕ್ಕೆ ಹೆಚ್ಚಿನ ಒತ್ತು ಕೊಡುತ್ತಿದ್ದಾರೆ. ಒಂದೇ ಶಾಲೆಗೆ ಎರಡು ಕೋಟಿ ಅನುದಾನ ಕೊಡುವ ಮೂಲಕ ಶಿಕ್ಷಣದ ಬಗ್ಗೆ ಅವರಿಗಿರುವ ಕಾಳಜಿ ತೋರಿಸಿದ್ದಾರೆ ಎಂದರು.

ಇದೇ ವೇಳೆ ಕಳೆದ ಸಾಲಿನ ನೀಟ್ ಪರೀಕ್ಷೆಯಲ್ಲಿ 1866 ನೇ ರ್ಯಾಂಕ್ ಪಡೆದು ಸಾಧನೆ ಮಾಡಿದ ವಿದ್ಯಾರ್ಥಿನಿ ಮಾನಸಾ ಹಾಗೂ ಎಸ್ಸೆಸ್ಸೆಲ್ಸಿ ಪರೀಕ್ಷೆಯಲ್ಲಿ ಶೇ.93 ಅಂಕ ಪಡೆದ ಅಫ್ಸಾನಾರನ್ನು ಸನ್ಮಾನಿಸಲಾಯಿತು. ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿ ಸಿದ್ದಣ್ಣ ಅಣಬಿ, ತಾಪಂ ಇಒ ಮಹಾದೇವ, ಎಇಇ ಟಿ.ಬನ್ನಪ್ಪ, ಚಂದ್ರಶೇಖರ, ಸಿಪಿಐ ಶಿವಪ್ಪ, ಜೆಸ್ಕಾ ಎಇಇ ಮಾರ್ಕಂಡಯ್ಯಾ, ಪ್ರಮುಖರಾದ



ಚಂದ್ರಗೌಡ, ಅಜಯರಡ್ಡಿ ಯಲ್ಹೇರಿ, ಬಸವರಾಜಪ್ಪ ಗೌಡ, ಗುರುನಾಥರಡ್ಡಿ, ಜೆಡಿಎಸ್ ಜಿಲ್ಲಾಧ್ಯಕ್ಷ ಸುಭಾಶ್ಚಂದ್ರ ಕಟಕಟಿ, ಪ್ರಾಚಾರ್ಯೆ ಶಿವಲೀಲಾ, ಸ್ವಾಗತಿಸಿದರು. ಚಂದ್ರಶೇಖರ ಗೋಗಿ ಅವರ ತಂಡದಿಂದ ಪ್ರಾರ್ಥನೆ ಗೀತೆ ನಡೆಯಿತು. ಕಾರ್ಯಕ್ರಮದ ನಂತರ ಮಕ್ಕಳೊಂದಿಗೆ ಕುಳಿತು ಶಾಸಕರು, ಅಧಿಕಾರಿಗಳು ಭೋಜನ ಸವಿದರು. ಕೊಪ್ಪಳದ ಅಜ್ಜನವರು, ಕುಮಾರಣ್ಣ ನನಗೆ ರೋಲ್ ಮಾಡಲ್

ನಾನು ನೋವಿನಲ್ಲಿದ್ದಾಗ ನನಗೆ ಸಾಂತ್ವನ ಹೇಳಿ ಧೈರ್ಯ ತುಂಬಿ ಆಶೀರ್ವಾದ ಮಾಡಿದ ಕೊಪ್ಪಳದ ಶ್ರೀ ಗವಿಮಠದ ಅಜ್ಜನವರು ಹಾಗೂ ರಾಜಕೀಯದಲ್ಲಿ ಸದಾ ಬೆನ್ನೆಲುಬಾಗಿ ನಿಂತು ಆಶೀರ್ವಾದ ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ ಅವರು ನನ್ನ ಗುರುಗಳಾಗಿದ್ದಾರೆ ಎಂದು ಶಾಸಕ ಶರಣಗೌಡ ಕಂದಕೂರ ಹೇಳಿದರು.

ಗುರು ಪೂರ್ಣಿಮೆ ಈ ದಿನ ನಿಮ್ಮ ಶಾಲೆಗೆ ಬಂದಿದ್ದೇನ.

## ಕಾವೇರಿ ನೀರು ಆದೇಶಕ್ಕೆ ಮೇಲ್ಮನವಿ: ಸಿಎಂ ಡಿಕೆಶಿ

### ಕಾವೇರಿ ಜಲಾನಯನ ಪ್ರದೇಶ ವೀಕ್ಷಣೆಗೆ ತಮಿಳುನಾಡು ಸಿಎಂ ವಿಜಯ್‌ಗೆ ಆಹ್ವಾನ



ನವದೆಹಲಿ, ಜು. 29:

ತಮಿಳುನಾಡಿಗೆ ಕಾವೇರಿ ನೀರು ಹರಿಸುವಂತೆ ಕಾವೇರಿ ನೀರು ನಿಯಂತ್ರಣ ಸಮಿತಿ ನೀಡಿರುವ ಆದೇಶವನ್ನು ಪ್ರಶ್ನಿಸಿ, ಕಾವೇರಿ ನೀರು ನಿರ್ವಹಣಾ ಪ್ರಾಧಿಕಾರಕ್ಕೆ ಮೇಲ್ಮನವಿ ಸಲ್ಲಿಸಲು ರಾಜ್ಯ ಸರ್ಕಾರ ನಿರ್ಧರಿಸಿದೆ ಎಂದು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ತಿಳಿಸಿದ್ದಾರೆ. ದೆಹಲಿಯ ಕರ್ನಾಟಕ ಭವನದಲ್ಲಿ ಬುಧವಾರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಅಡ್ವೋಕೇಟ್ ಜನರಲ್, ಕಾನೂನು ತಜ್ಞರು ಹಾಗೂ ಹಿರಿಯ ಅಧಿಕಾರಿಗಳೊಂದಿಗೆ ಸಮಾಲೋಚನೆ ನಡೆಸಿದ್ದು, ಮೇಲ್ಮನವಿಗೆ ಅಗತ್ಯ ಸಿದ್ಧತೆಗಳು ಪೂರ್ಣಗೊಂಡಿವೆ ಎಂದು ಹೇಳಿದರು. ರಾಜ್ಯದಲ್ಲಿ ಮಳೆಯ ಕೊರತೆಯಿಂದ ಕಾವೇರಿ ಜಲಾಶಯಗಳಲ್ಲಿ ನೀರಿನ ಸಂಗ್ರಹ ತೀವ್ರವಾಗಿ ಕುಸಿದಿದೆ. ಈ ಹಿಂದೆ ತಮಿಳುನಾಡಿನ ಮನವಿಯನ್ನು ಎರಡು ಬಾರಿ ತಿರಸ್ಕರಿಸಿದ್ದ ಸಮಿತಿಯೇ ಈ ಬಾರಿ ನೀರು ಹರಿಸುವಂತೆ ಆದೇಶಿಸಿರುವುದು ಸಮಂಜಸವಲ್ಲ. ಹೀಗಾಗಿ ಕಾನೂನು ಹೋರಾಟ ನಡೆಸಲು ತೀರ್ಮಾನಿಸಲಾಗಿದೆ ಎಂದು ತಿಳಿಸಿದರು.

ಬೆಂಗಳೂರಿಗೆ ಮರಳಿದ ಬಳಿಕ ಈ ವಿಚಾರವಾಗಿ ವಿರೋಧ ಪಕ್ಷದ ನಾಯಕರೊಂದಿಗೆ ಚರ್ಚೆ ನಡೆಸಲಾಗುವುದು ಎಂದ ಅವರು, ತಮಿಳುನಾಡು ಮುಖ್ಯಮಂತ್ರಿ ವಿಜಯ್ ದೂರವಾಣಿ ಮೂಲಕ ಸಂಪರ್ಕಿಸಿ ಮಾತುಕತೆಗೆ ಆಸಕ್ತಿ ವ್ಯಕ್ತಪಡಿಸಿದ್ದಾರೆ. ರಾಜ್ಯಕ್ಕೆ ಬರುವಂತೆ ಆಹ್ವಾನಿಸಲಾಗಿದ್ದು, ಕಾವೇರಿ ಜಲಾನಯನ ಪ್ರದೇಶದ ವಾಸ್ತವ ಸ್ಥಿತಿಯನ್ನು ಸ್ವತಃ ವೀಕ್ಷಿಸುವಂತೆ ಮನವಿ ಮಾಡಲಾಗಿದೆ. ಅಗತ್ಯವಿದ್ದರೆ ಹೆಲಿಕಾಪ್ಟರ್ ವ್ಯವಸ್ಥೆಯನ್ನೂ ಕಲ್ಪಿಸಲಾಗುವುದು ಎಂದು ಹೇಳಿದರು. ವಿದ್ಯಾರ್ಥಿಗಳ ಪ್ರತಿಭಟನೆ ವೇಳೆ ಪೆಲೆಟ್ ಗನ್ ಬಳಕೆಯ ಕುರಿತು ಪ್ರತಿಕ್ರಿಯಿಸಿದ ಸಿಎಂ, "ವಿದ್ಯಾರ್ಥಿಗಳ ಮೇಲೆ ಪೆಲೆಟ್ ಗನ್ ಪ್ರಯೋಗ ನನ್ನ ರಾಜಕೀಯ ಜೀವನದಲ್ಲೇ ಇದೇ ಮೊದಲು ನೋಡುತ್ತಿದ್ದೇನೆ. ಇದಕ್ಕೆ ಅನುಮತಿ ನೀಡಿದವರು ಯಾರು ಎಂಬುದನ್ನು ಕೇಂದ್ರ ಸರ್ಕಾರ ಹಾಗೂ ಗೃಹ ಸಚಿವರು ದೇಶದ ಮುಂದೆ ಸ್ಪಷ್ಟಪಡಿಸಬೇಕು" ಎಂದು ಆಗ್ರಹಿಸಿದರು.

## ಗುರುಪೂರ್ಣಿಮೆಯಲ್ಲಿ ತಾಯಿಗೆ ವಿಶೇಷ ಗೌರವ: ಬಿಎಲ್‌ಡಿಇ ಶಾಲೆಯಲ್ಲಿ ಭಾವಪೂರ್ಣ 'ಮಾತೃ ವಂದನಾ'

ವಿಜಯಪುರ, ಜು. 29:

ನಗರದ ಬಿಎಲ್‌ಡಿಇ ಸಂಸ್ಥೆಯ ಶ್ರೀ ಬಿ.ಎಂ. ಪಾಟೀಲ ಪಬ್ಲಿಕ್ ಸಿಬಿಎಸ್‌ಸಿ ಶಾಲೆಯಲ್ಲಿ ಗುರುಪೂರ್ಣಿಮೆ ಅಂಗವಾಗಿ ಬುಧವಾರ ಆಯೋಜಿಸಿದ್ದ 'ಮಾತೃ ವಂದನಾ' ಕಾರ್ಯಕ್ರಮ ಭಾವನಾತ್ಮಕ ಕ್ಷಣಗಳಿಗೆ ಸಾಕ್ಷಿಯಾಯಿತು. ವಿದ್ಯಾರ್ಥಿಗಳು ತಮ್ಮ ತಾಯಂದಿರಿಗೆ ಪಾದಪೂಜೆ ಸಲ್ಲಿಸಿ ಕೃತಜ್ಞತೆ ವ್ಯಕ್ತಪಡಿಸಿದ ದೃಶ್ಯ ಎಲ್ಲರ ಮನಸೂರೆಗೊಂಡಿತು.




ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಯಾಗಿ ಪಾಲ್ಗೊಂಡಿದ್ದ ಅಮೆರಿಕದ ಅಕ್ಕ ಸಮ್ಮೇಳನದಲ್ಲಿ ಭಾಗವಹಿಸಿದ್ದ ಸಾಹಿತಿ ಶಾರದಾ ಮುಳ್ಳೂರ ಮಾತನಾಡಿ, "ಪ್ರತಿಯೊಬ್ಬರ ಮನೆಯೇ ಮೊದಲ ಪಾಠಶಾಲೆ, ಜನನಿಯೇ ಮೊದಲ ಗುರು. ತಾಯಿಯ ಪ್ರೀತಿ, ತ್ಯಾಗ ಮತ್ತು ಮಾರ್ಗದರ್ಶನಕ್ಕೆ ಯಾವುದೇ ಪ್ರತಿಫಲ ನೀಡಲು ಸಾಧ್ಯವಿಲ್ಲ. ಮಾತೃವಂದನೆ ಎಂಬುದು ಒಂದು ದಿನದ ಆಚರಣೆಯಲ್ಲ, ಜೀವನಪರ್ಯಂತ ಸಲ್ಲಿಸಬೇಕಾದ ಗೌರವವಾಗಿದೆ," ಎಂದು ಹೇಳಿದರು.

10ನೇ ತರಗತಿ ವಿದ್ಯಾರ್ಥಿಗಳ ತಾಯಂದಿರು ವಿಶೇಷ ಅತಿಥಿಗಳಾಗಿ ಭಾಗವಹಿಸಿದ್ದು ಕಾರ್ಯಕ್ರಮದ ಪ್ರಮುಖ ಆಕರ್ಷಣೆಯಾಗಿತ್ತು. ವೇದಿಕೆಯ ಮುಂಭಾಗದಲ್ಲಿ ಅವರಿಗೆ ವಿಶೇಷ ಆಸನ ವ್ಯವಸ್ಥೆ ಮಾಡಲಾಗಿದ್ದು, ವಿದ್ಯಾರ್ಥಿಗಳು ಕಳಸ, ಹೂವು ಹಾಗೂ ಗಂಧದೊಂದಿಗೆ ತಾಯಂದಿರ ಪಾದಪೂಜೆ ನೆರವೇರಿಸಿದರು.

ಇದೇ ವೇಳೆ ಅಮ್ಮನ ಕುರಿತಾಗಿ ವಿದ್ಯಾರ್ಥಿಗಳು ವ್ಯಕ್ತಪಡಿಸಿದ ಭಾವನಾತ್ಮಕ ವಿಡಿಯೊ ಸಂದೇಶಗಳನ್ನು ಪ್ರದರ್ಶಿಸಲಾಯಿತು. ಮಕ್ಕಳ ಪ್ರೀತಿಯ ಮಾತುಗಳನ್ನು ಕಂಡು ಅನೇಕ ತಾಯಂದಿರ ಕಣ್ಣಲ್ಲಿ ಸಂತಸದ ಕಣ್ಣೀರು ಮಿನುಗಿದರೆ, ಸಭಾಂಗಣವೇ ಮಮತೆಯ ವಾತಾವರಣದಿಂದ ತುಂಬಿ ತುಳುಕಿತು.

ಕಾರ್ಯಕ್ರಮದಲ್ಲಿ ಶಾಲೆಯ ಪ್ರಭಾರಿ ಪ್ರಾಚಾರ್ಯೆ ವಸುಧಾ ನಾರ್ವೇಕರ, ಹಿರಿಯ ಕಾರ್ಯಸಂಯೋಜಕಿ ದೀಪಾ ಜಂಬೂರೆ ಹಾಗೂ ಶಾಲೆಯ ಶಿಕ್ಷಕ–ಶಿಕ್ಷಕಿಯರು ಉಪಸ್ಥಿತರಿದ್ದರು.

9ನೇ ತರಗತಿಯ ವಿದ್ಯಾರ್ಥಿನಿಯರಾದ ವೈಭವಿ ನಾರ್ವೇಕರ ಮತ್ತು ಅದ್ವಿಕಾ ಸಾಸನೂರ ಕಾರ್ಯಕ್ರಮ ನಿರೂಪಿಸಿದರು. ವಿದ್ಯಾರ್ಥಿನಿ ನಿಯತಿ ಭಗವತಿ ಗುರುಪೂರ್ಣಿಮೆಯ ಮಹತ್ವ ಕುರಿತು ಮಾತನಾಡಿದರೆ, ಆಶ್ವಿ ಚಿತ್ತಾಪೂರ ವಂದನಾರ್ಪಣೆ ಸಲ್ಲಿಸಿದರು.

## ಕಾಲುವೆ ನೀರಿನ ವೇಳಾಪಟ್ಟಿ ಬಹಿರಂಗಪಡಿಸಿ;

### ಕ್ರೀಡಾಂಗಣ ನಿರ್ಮಾಣಕ್ಕೆ ತಜ್ಞರ ಸಲಹೆ ಪಡೆಯಿರಿ

### ಭಾರತೀಯ ಕಿಸಾನ್ ಸಂಘದಿಂದ ಜಿಲ್ಲಾಧಿಕಾರಿಗೆ ಮನವಿ



ವಿಜಯಪುರ, ಜು. 29:

ಜಿಲ್ಲೆಯ ನೀರಾವರಿ ಕಾಲುವೆಗಳಿಗೆ ನೀರು ಹರಿಸುವ ದಿನಾಂಕ, ಅವಧಿ ಹಾಗೂ ವೇಳಾಪಟ್ಟಿಯನ್ನು ಮುಂಚಿತವಾಗಿಯೇ ಪ್ರಕಟಿಸಿ, ರೈತರಿಗೆ ವಾಟ್ಸಾಪ್ ಸೇರಿದಂತೆ ಡಿಜಿಟಲ್ ಮಾಧ್ಯಮಗಳ ಮೂಲಕ ನಿಯಮಿತ ಮಾಹಿತಿ ತಲುಪಿಸುವ ವ್ಯವಸ್ಥೆ ಜಾರಿಗೊಳಿಸಬೇಕು ಎಂದು ಭಾರತೀಯ ಕಿಸಾನ್ ಸಂಘ ಕರ್ನಾಟಕ ಪ್ರದೇಶ ಜಿಲ್ಲಾಧಿಕಾರಿ ಡಾ. ಆನಂದ ಅವರಿಗೆ ಮನವಿ ಸಲ್ಲಿಸಿದೆ. ಮನವಿ ಸಲ್ಲಿಸಿದ ಬಳಿಕ ಮಾತನಾಡಿದ ಸಂಘದ ಕರ್ನಾಟಕ ಪ್ರದೇಶ ರಾಜ್ಯಾಧ್ಯಕ್ಷ ಭೀಮಸೇನ ಕೊಕರೆ, "ಆಲಮಟ್ಟಿ ಜಲಾಶಯದಲ್ಲಿ ಸಮರ್ಪಕ ನೀರಿನ ಸಂಗ್ರಹವಿದ್ದರೂ, ಯಾವ ಕಾಲುವೆಗೆ ಯಾವ ದಿನದಿಂದ ಎಷ್ಟು ದಿನ ನೀರು ಹರಿಸಲಾಗುತ್ತದೆ ಎಂಬ ಸ್ಪಷ್ಟ ಮಾಹಿತಿ ರೈತರಿಗೆ ಸಿಗುತ್ತಿಲ್ಲ. ಮಾಹಿತಿ ಕೊರತೆಯಿಂದ ಬಿತ್ತನೆ, ನೀರಾವರಿ ಹಾಗೂ ಕೃಷಿ ಕಾರ್ಯಗಳ ಯೋಜನೆಗೆ ಅಡಚಣೆ ಉಂಟಾಗುತ್ತಿದೆ" ಎಂದು ಹೇಳಿದರು. ಜಿಲ್ಲಾಡಳಿತ ಹಾಗೂ ನೀರಾವರಿ ಇಲಾಖೆ ಕಾಲುವೆವಾರು ನೀರು ಬಿಡುವ ವೇಳಾಪಟ್ಟಿಯನ್ನು ಮುಂಚಿತವಾಗಿ ಪ್ರಕಟಿಸಬೇಕು. ಅಲ್ಲದೆ, ಸಂಬಂಧಿತ ರೈತರ ವಾಟ್ಸಾಪ್ ಗುಂಪುಗಳನ್ನು ರಚಿಸಿ ನೀರು ಹರಿಸುವ ದಿನಾಂಕ, ವಿದ್ಯುತ್ ವ್ಯತ್ಯಯ, ತುರ್ತು ಬದಲಾವಣೆ ಸೇರಿದಂತೆ ಎಲ್ಲ ಮಾಹಿತಿಯನ್ನು ಕ್ಷಣಕ್ಷಣಕ್ಕೂ ತಲುಪಿಸುವ ವ್ಯವಸ್ಥೆ ಜಾರಿಗೊಳಿಸಬೇಕು ಎಂದು ಆಗ್ರಹಿಸಿದರು.

## 81 ವಿದ್ಯಾರ್ಥಿನಿಯರ ಭವಿಷ್ಯಕ್ಕೆ 7.77 ಲಕ್ಷದ ಆಸರೆ




ಧಾರವಾಡ, ಜು. 29:

ಆರ್ಥಿಕ ಸಂಕಷ್ಟವು ಶಿಕ್ಷಣಕ್ಕೆ ಅಡ್ಡಿಯಾಗಬಾರದು ಎಂಬ ಧ್ಯೇಯದೊಂದಿಗೆ ಯಾರ್ಪಿಡ್ ಹಾಗೂ ವಿದ್ಯಾಪೋಷಕ ಸಂಸ್ಥೆಗಳ ಸಹಯೋಗದಲ್ಲಿ 81 ವಿದ್ಯಾರ್ಥಿನಿಯರಿಗೆ ಒಟ್ಟು 7.77 ಲಕ್ಷ ವಿದ್ಯಾರ್ಥಿವೇತನ ವಿತರಿಸಲಾಯಿತು. ಧಾರವಾಡದ ಕೆ.ಎಚ್. ಕಬ್ಬೂರ ಇನ್‌ಸ್ಟಿಟ್ಯೂಟ್ ಆಫ್ ಎಂಜಿನಿಯರಿಂಗ್, ಜೆ.ಎಸ್.ಎಸ್. ಕಾಲೇಜು ಕ್ಯಾಂಪಸ್‌ನ ಪ್ರೇರಣಾ ಹಾಲ್‌ನಲ್ಲಿ ನಡೆದ ಕಾರ್ಯಕ್ರಮವು ವಿದ್ಯಾರ್ಥಿನಿಯರ ಭವಿಷ್ಯಕ್ಕೆ ಹೊಸ ಭರವಸೆಯ ಬೆಳಕಾಯಿತು.

ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಭಾಗವಹಿಸಿದ್ದ ಐಐಟಿ ಪ್ರಾಧ್ಯಾಪಕ ಹಾಗೂ ಮೈಂಡ್ ವೇವ್ ಎಜುಕೇಶನ್ ಹಬ್‌ನ ಪ್ರಮುಖ ಪ್ರೊ. ಎಸ್.ಎಂ. ಶಿವಪ್ರಸಾದ್ ಮತ್ತು ವಿದ್ಯಾಪೋಷಕ ಸಂಸ್ಥೆಯ ಸಿಇಒ ಡಾ. ಶರತ್ ಐರಣಿ ಅವರು, ಶಿಕ್ಷಣವೇ ಜೀವನ ಪರಿವರ್ತನೆಯ ಪ್ರಬಲ ಸಾಧನವಾಗಿದ್ದು, ಆರ್ಥಿಕ ಅಡೆತಡೆಗಳು ಪ್ರತಿಭೆಗೆ ಅಡ್ಡಿಯಾಗಬಾರದು ಎಂದು ಕರೆ ನೀಡಿದರು.

ಯಾರ್ಪಿಡ್ ಸಂಸ್ಥೆಯ ಶ್ರೀಮತಿ ವಾಣಿಶ್ರೀ ಪುರೋಹಿತ್ ಅವರು ವಿದ್ಯಾರ್ಥಿವೇತನ ಯೋಜನೆಯ ಉದ್ದೇಶ ಹಾಗೂ ಅದರ ಸಾಮಾಜಿಕ ಮಹತ್ವವನ್ನು ವಿವರಿಸಿ, ಪ್ರತಿಭಾವಂತ ವಿದ್ಯಾರ್ಥಿನಿಯರಿಗೆ ಸಮಾಜದ ಬೆಂಬಲ ಅತ್ಯಗತ್ಯ ಎಂದರು.

ವಿದ್ಯಾರ್ಥಿವೇತನ ವಿತರಣೆಯೊಂದಿಗೆ ಖ್ಯಾತ ಪ್ರೇರಣಾದಾಯಕ ವಾಗ್ಮಿ ಪ್ರವೀಣ್ ಗುಡಿ ಅವರು 'ಖಣಠಠಿ ಖಟಠಿಡಿಖುಟಿರ, ಖಣಚಿಡಿಣ ಖಟಿಠಿಡುಟಿರ' ವಿಷಯದ ಕುರಿತು ವಿಶೇಷ ಉಪನ್ಯಾಸ ನೀಡಿ, ಯಶಸ್ಸಿನ ಹಿಂದೆ ಓಡುವುದಕ್ಕಿಂತ ಸಮಾಜಕ್ಕೆ ಪ್ರೇರಣೆಯಾಗುವ ವ್ಯಕ್ತಿತ್ವವನ್ನು ಬೆಳೆಸಿಕೊಳ್ಳುವಂತೆ ವಿದ್ಯಾರ್ಥಿನಿಯರಿಗೆ ಸಂದೇಶ ನೀಡಿದರು. ಅವರ ಸಂವಾದ ವಿದ್ಯಾರ್ಥಿನಿಯರಲ್ಲಿ ಆತ್ಮವಿಶ್ವಾಸ ಮತ್ತು ಹೊಸ ಚೈತನ್ಯ ಮೂಡಿಸಿತು. ಕಾರ್ಯಕ್ರಮದಲ್ಲಿ ವಿದ್ಯಾಪೋಷಕ ಸಂಸ್ಥೆಯ ಶ್ರೀಮತಿ ರತ್ನಾ ಹಿಪ್ಪರಗಿ, ಸಂಸ್ಥೆಯ ಸಿಬ್ಬಂದಿ, ಯಾರ್ಪಿಡ್ ಪ್ರತಿನಿಧಿಗಳು, ಶಿಕ್ಷಕರು ಹಾಗೂ ವಿದ್ಯಾರ್ಥಿನಿಯರು ಉಪಸ್ಥಿತರಿದ್ದರು.

## ಸುಪ್ರೀಂಕೋರ್ಟ್ ತೀರ್ಪಿನಿಂದ ವಿಜಯಪುರ ವಿಮಾನ ನಿಲ್ದಾಣ ಆರಂಭಕ್ಕೆ ಹಸಿರು ನಿಶಾನೆ

ಬೆಂಗಳೂರು, ಜು. 29: ಬಹುನಿರೀಕ್ಷಿತ ವಿಜಯಪುರ ವಿಮಾನ ನಿಲ್ದಾಣ ಕಾರ್ಯಾರಂಭಕ್ಕೆ ಇದ್ದ ಪ್ರಮುಖ ಕಾನೂನು ತೊಡಕು ನಿವಾರಣೆಯಾಗಿದ್ದು, ಸುಪ್ರೀಂಕೋರ್ಟ್ ನೀಡಿರುವ ಮಹತ್ವದ ತೀರ್ಪಿನಿಂದ ಯೋಜನೆಗೆ ಹೊಸ ಚೈತನ್ಯ ಸಿಕ್ಕಿದೆ. ಪರಿಸರ ಸಂಬಂಧಿತ ಅಂತಿಮ ಅನುಮತಿ ನಿರೀಕ್ಷೆಯಂತೆ ದೊರೆತರೆ ಮುಂದಿನ ಮೂರು ತಿಂಗಳೊಳಗೆ ವಿಜಯಪುರ ವಿಮಾನ ನಿಲ್ದಾಣವನ್ನು ಸಾರ್ವಜನಿಕ ಸೇವೆಗೆ ಸಮರ್ಪಿಸುವ ವಿಶ್ವಾಸವಿದೆ ಎಂದು ರಾಜ್ಯದ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಸೌಕರ್ಯ ಅಭಿವೃದ್ಧಿ ಸಚಿವ ಎಂ.ಬಿ. ಪಾಟೀಲ ತಿಳಿಸಿದ್ದಾರೆ.



ಸುಪ್ರೀಂಕೋರ್ಟ್‌ನ ಮುಖ್ಯ ನ್ಯಾಯಮೂರ್ತಿ ಸೂರ್ಯಕಾಂತ್, ನ್ಯಾಯಮೂರ್ತಿ ಜಯಮಾಲ್ಯ ಬಾಗ್ಚಿ ಹಾಗೂ ನ್ಯಾಯಮೂರ್ತಿ ವಿಪುಲ್ ಎಂ. ಪಾಂಚೋಲಿ ಅವರನ್ನೊಳಗೊಂಡ ತ್ರಿಸದಸ್ಯ ಪೀಠ ಬುಧವಾರ ನೀಡಿದ ಅಂತಿಮ ತೀರ್ಪಿನಲ್ಲಿ, ಪರಿಸರ ಅನುಮತಿ ಬಾಕಿ ಇರುವ ಯೋಜನೆಗಳ ಕುರಿತು ಮಹತ್ವದ ಸ್ಪಷ್ಟನೆ ನೀಡಿದೆ. ಈ ತೀರ್ಪಿನ ಪರಿಣಾಮ ವಿಜಯಪುರ ವಿಮಾನ ನಿಲ್ದಾಣ ಯೋಜನೆಗೆ ಇದ್ದ ಕಾನೂನು ಅಡೆತಡೆ ದೂರವಾಗಿದ್ದು, ಮುಂದಿನ ಆಡಳಿತಾತ್ಮಕ ಪ್ರಕ್ರಿಯೆಗೆ ದಾರಿ ಸುಗಮವಾಗಿದೆ.

## 'ವಿಬಿ–ಜಿ ರಾಮ ಜಿ' ಜನಜಾಗೃತಿ ಅಭಿಯಾನಕ್ಕೆ ಚಾಲನೆ

### 382 ದಿನಗೂಲಿ, 125 ದಿನಗಳ ಉದ್ಯೋಗ ಖಾತರಿ; ಪಿಡಿಒ ರೇಣುಕಾ ಸೋಲಾಪುರ

ತಿಕೋಟಾ, ಜು. 29:

ಗ್ರಾಮೀಣ ಕೂಲಿಕಾರರಿಗೆ ಉದ್ಯೋಗ ಭದ್ರತೆ ಕಲ್ಪಿಸುವ ಉದ್ದೇಶದಿಂದ ಕೇಂದ್ರ ಹಾಗೂ ರಾಜ್ಯ ಸರ್ಕಾರ ಜಂಟಿಯಾಗಿ ಜಾರಿಗೊಳಿಸಿರುವ 'ವಿಕಸಿತ ಭಾರತ ಗ್ಯಾರಂಟಿ ಫಾರ್ ರೋಜ್‌ಗಾರ್ ಅಂಡ್ ಆಜೀವಿಕಾ ಮಿಷನ್ ಗ್ರಾಮೀಣ (ವಿಬಿ–ಜಿ ರಾಮ ಜಿ)' ಯೋಜನೆಯ ಜನಜಾಗೃತಿ ಅಭಿಯಾನಕ್ಕೆ ತಾಲೂಕಿನ ಕನಮಡಿ ಗ್ರಾಮ ಪಂಚಾಯತಿಯಲ್ಲಿ ಬುಧವಾರ ಚಾಲನೆ ನೀಡಲಾಯಿತು.



ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಪಂಚಾಯತಿ ಅಭಿವೃದ್ಧಿ ಅಧಿಕಾರಿ ರೇಣುಕಾ ಸೋಲಾಪುರ, "ಕೆಲಸ ಅರಸಿ ಗ್ರಾಮ ಪಂಚಾಯತಿಗೆ ಬರುವ ಯಾವುದೇ ಅರ್ಹ ಕೂಲಿಕಾರರು ಉದ್ಯೋಗದಿಂದ ವಂಚಿತರಾಗುವುದಿಲ್ಲ. ಗ್ರಾಮಾಭಿವೃದ್ಧಿಯ ಕಾಮಗಾರಿಗಳಲ್ಲಿ ಪಾಲ್ಗೊಂಡು ತಮ್ಮ ಕುಟುಂಬದ ಆರ್ಥಿಕ ಸ್ಥಿತಿಯನ್ನು ಬಲಪಡಿಸಿಕೊಳ್ಳಬೇಕು" ಎಂದು ಕರೆ ನೀಡಿದರು.

ಯೋಜನೆಯಡಿ ಪ್ರತಿ ಕುಟುಂಬಕ್ಕೆ ವರ್ಷಕ್ಕೆ 125 ದಿನಗಳ ಉದ್ಯೋಗ ಖಾತರಿ ನೀಡಲಾಗುತ್ತಿದ್ದು, ದಿನಗೂಲಿಯನ್ನು 370ರಿಂದ 382ಕ್ಕೆ ಹೆಚ್ಚಿಸಲಾಗಿದೆ ಎಂದು ತಿಳಿಸಿದರು. ಪುರುಷ ಮತ್ತು ಮಹಿಳೆಯರಿಗೆ ಸಮಾನ ಕೂಲಿ, ಗರಿಷ್ಠ 15 ದಿನಗಳೊಳಗೆ ಕೂಲಿಯನ್ನು ನೇರವಾಗಿ ಬ್ಯಾಂಕ್ ಖಾತೆಗೆ ಜಮಾ ಮಾಡುವ ವ್ಯವಸ್ಥೆ ಹಾಗೂ ವಿಳಂಬವಾದರೆ ಪರಿಹಾರ ನೀಡುವ ವ್ಯವಸ್ಥೆಯೂ ಕಲ್ಪಿಸಲಾಗಿದೆ ಎಂದರು.

ಇದಲ್ಲದೆ ಕೆರೆ, ಕಾಲುವೆ, ರಸ್ತೆ, ಶಾಲಾ ಆವರಣ ಗೋಡೆ ಸೇರಿದಂತೆ ಗ್ರಾಮದ ಶಾಶ್ವತ ಅಭಿವೃದ್ಧಿ ಕಾಮಗಾರಿಗಳಿಗೆ ಆದ್ಯತೆ ನೀಡಲಾಗುತ್ತಿದ್ದು, ಗ್ರಾಮೀಣ ಅಭಿವೃದ್ಧಿಯೊಂದಿಗೆ ಉದ್ಯೋಗ ಸೃಷ್ಟಿಯೂ ಈ ಯೋಜನೆಯ ಪ್ರಮುಖ ಉದ್ದೇಶವಾಗಿದೆ ಎಂದು ವಿವರಿಸಿದರು.

ತಾಲೂಕು ಐಇಸಿ ಸಂಯೋಜಕ ಕಲ್ಲಪ್ಪ ನಂದರಗಿ ಮಾತನಾಡಿ, ಜುಲೈ 1ರಿಂದ ಮನರೇಗಾ ಯೋಜನೆಗೆ ಬದಲಾಗಿ 'ವಿಬಿ–ಜಿ ರಾಮ ಜಿ' ಯೋಜನೆ ಜಾರಿಗೆ ಬಂದಿದೆ. ತಾಲೂಕಿನ 14 ಗ್ರಾಮ ಪಂಚಾಯತಿಗಳಲ್ಲಿ ಈಗಾಗಲೇ ಜನಜಾಗೃತಿ ಕಾರ್ಯಕ್ರಮಗಳನ್ನು ಯಶಸ್ವಿಯಾಗಿ ನಡೆಸಲಾಗಿದೆ ಎಂದು ತಿಳಿಸಿದರು.

ಎಲ್ಲಾ ನೋಂದಾಯಿತ ಕೂಲಿಕಾರರು ಇ–ಕೆವೈಸಿ ಪೂರ್ಣಗೊಳಿಸಿ, ಆಧಾರ್ ಜೋಡಣೆಯೊಂದಿಗೆ ಜಾಬ್ ಕಾರ್ಡ್‌ಗಳನ್ನು ನವೀಕರಿಸಿಕೊಳ್ಳಬೇಕು ಎಂದು ಮನವಿ ಮಾಡಿದ ಅವರು, ಜೂನ್ 30ರವರೆಗೆ ಮನರೇಗಾ ಅಡಿಯಲ್ಲಿ ಆರಂಭಗೊಂಡಿದ್ದ ಕಾಮಗಾರಿಗಳನ್ನು ಹೊಸ ಯೋಜನೆಯ ನಿಯಮಾನುಸಾರ ಯಾವುದೇ ಅಡಚಣೆ ಇಲ್ಲದೆ ಮುಂದುವರಿಸಲಾಗುತ್ತಿದೆ ಎಂದು ಸ್ಪಷ್ಟಪಡಿಸಿದರು.

"ಗ್ರಾಮೀಣ ಭಾಗದ ಕೂಲಿಕಾರರು ಉದ್ಯೋಗಕ್ಕಾಗಿ ನಗರಗಳಿಗೆ ವಲಸೆ ಹೋಗುವ ಅಗತ್ಯವಿಲ್ಲ. ತಮ್ಮ ಊರಿನಲ್ಲಿಯೇ ಗೌರವಯುತ ಉದ್ಯೋಗ ಮತ್ತು ಜೀವನೋಪಾಯವನ್ನು ಈ ಯೋಜನೆಯಡಿ ಪಡೆದುಕೊಳ್ಳಬಹುದು" ಎಂದು ಅವರು ಹೇಳಿದರು.

ಕಾರ್ಯಕ್ರಮದಲ್ಲಿ ಕಾರ್ಯದರ್ಶಿ ಶ್ರೀಶೈಲ ಜಾಲಗೇರಿ, ಬಿಎಫ್‌ಟಿ ಸಿದ್ರಾಯ ದಾಶ್ಯಾಳ, ಎಂಬಿಕೆ ಶಾಂತಾ ಬಿರಾದಾರ, ಸ್ವಸಹಾಯ ಸಂಘಗಳ ಮಹಿಳೆಯರು ಹಾಗೂ ನೂರಾರು ಕೂಲಿಕಾರರು ಭಾಗವಹಿಸಿದ್ದರು.

## ಮೊಬೈಲ್ ಗೀಳಿನಿಂದ ದೂರವಿದ್ದು ಓದಿನತ್ತ ಗಮನ ಹರಿಸಿ: ಶ್ರೀ ಪ್ರಕಾಶ ಮಹಾರಾಜ್

ತಿಡಗುಂದಿ ಜು. 29:

ಮೊಬೈಲ್ ಗೀಳಿನಿಂದ ದೂರವಿದ್ದು ವಿದ್ಯಾಭ್ಯಾಸದತ್ತ ಸಂಪೂರ್ಣ ಗಮನ ಹರಿಸಿದರೆ ಮಾತ್ರ ವಿದ್ಯಾರ್ಥಿಗಳು ತಮ್ಮ ಗುರಿ ಸಾಧಿಸಬಹುದು ಎಂದು ಭಾರತೀಯ ಸುರಾಜ್ಯ ಸಂಸ್ಥೆಯ ಉಪಾಧ್ಯಕ್ಷ ಶ್ರೀ ಪ್ರಕಾಶ ಮಹಾರಾಜ್ ಕರೆ ನೀಡಿದರು.



ಭಾರತೀಯ ಸುರಾಜ್ಯ ಸಂಸ್ಥೆಯ ವತಿಯಿಂದ ಕಾರ್ಗಿಲ್ ವಿಜಯೋತ್ಸವ ಅಂಗವಾಗಿ ವಿಜಯಪುರ ತಾಲೂಕಿನ ತಿಡಗುಂದಿಯಲ್ಲಿ ಆಯೋಜಿಸಿದ್ದ ಪ್ರಬಂಧ ಹಾಗೂ ಭಾಷಣ ಸ್ಪರ್ಧೆಯಲ್ಲಿ ವಿಜೇತರಾದ ವಿದ್ಯಾರ್ಥಿಗಳಿಗೆ ಬಹುಮಾನ ವಿತರಿಸಿ ಅವರು ಮಾತನಾಡಿದರು.

ಕರ್ನಾಟಕ ಹಾಗೂ ಮಹಾರಾಷ್ಟ್ರದ ವಿಜಯಪುರ, ಬೆಳಗಾವಿ, ಬಾಗಲಕೋಟೆ, ಧಾರವಾಡ, ಗದಗ, ಯಾದಗಿರಿ, ಕಲಬುರಗಿ, ಸೊಲ್ಲಾಪುರ ಸೇರಿದಂತೆ ಹಲವು ಜಿಲ್ಲೆಗಳ ಸುಮಾರು 100ಕ್ಕೂ ಹೆಚ್ಚು ಶಾಲಾ–ಕಾಲೇಜುಗಳ 30 ಸಾವಿರಕ್ಕೂ ಅಧಿಕ ವಿದ್ಯಾರ್ಥಿಗಳಿಗೆ ರಾಷ್ಟ್ರಭಕ್ತಿ, ಮೌಲ್ಯ ಶಿಕ್ಷಣ ಮತ್ತು ವ್ಯಕ್ತಿತ್ವ ವಿಕಸನ ಕುರಿತು ಉಪನ್ಯಾಸ ನೀಡಿರುವುದಾಗಿ ತಿಳಿಸಿದರು.

ಸಮರ್ಥ ಸದ್ಗುರು ಶ್ರೀ ಗಣಪತಿ ರಾವ್ ಮಹಾರಾಜ್ ಅವರ ತತ್ವಗಳು ಹಾಗೂ ಧ್ಯಾನದ ಮಹತ್ವವನ್ನು ವಿದ್ಯಾರ್ಥಿಗಳಿಗೆ ಮನವರಿಕೆ ಮಾಡಿಕೊಡಲಾಗುತ್ತಿದೆ. ಮೊಬೈಲ್ ಅತಿಯಾದ ಬಳಕೆಯಿಂದ ಉಂಟಾಗುವ ದುಷ್ಪರಿಣಾಮಗಳ ಬಗ್ಗೆ ಜಾಗೃತಿ ಮೂಡಿಸಲಾಗಿದ್ದು, ಪೋಷಕರು, ಶಿಕ್ಷಕರು ಹಾಗೂ ಹಿರಿಯರೊಂದಿಗೆ ಗೌರವಯುತವಾಗಿ ನಡೆದುಕೊಳ್ಳುವ ಮೌಲ್ಯಗಳನ್ನು ತಿಳಿಸಲಾಯಿತು.

ವಿದ್ಯಾರ್ಥಿಗಳು ಪರಿಣಾಮಕಾರಿಯಾಗಿ ಅಧ್ಯಯನ ಮಾಡುವ ವಿಧಾನಗಳು, ಸಮಯ ನಿರ್ವಹಣೆ ಹಾಗೂ ಏಕಾಗ್ರತೆ ಹೆಚ್ಚಿಸಿಕೊಳ್ಳುವ ಕುರಿತು ಉಪಯುಕ್ತ ಸಲಹೆಗಳನ್ನು ನೀಡಲಾಯಿತು. ಪ್ರಸಕ್ತ ಶೈಕ್ಷಣಿಕ ವರ್ಷದಲ್ಲಿ 100 ಶಾಲೆಗಳಿಗೆ ಭೇಟಿ ನೀಡಿ ವಿದ್ಯಾರ್ಥಿಗಳಲ್ಲಿ ಜಾಗೃತಿ ಮೂಡಿಸುವ ಗುರಿ ಹೊಂದಿರುವುದಾಗಿ ಶ್ರೀ ಪ್ರಕಾಶ ಮಹಾರಾಜ್ ತಿಳಿಸಿದರು.

EDITOR : S VENKATESULU, D.NO.: 4/38, MAIN ROAD, SETTUR, ANANTHAPUR, ANDHRA PRADESH - 515767, PUBLISHER : S VENKATESULU 237, Ward No 22 Talur Road, Lingamma Compund, Bellary, Bellary, Karnataka - 583101. KARNATAKA - 583113.
OWNER : S VENKATESULU D.NO.: 4/38, MAIN ROAD, SETTUR, ANANTHAPUR, ANDHRA PRADESH - 515767. PRINTER: VADDARA DODDA VEERESH, 1ST WARD, NAYAKARA ONI, AGASARA ONI, AT/POST-SOMALAPURA, BELLARY, KARNATAKA - 583101.